# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**
ಯಾರಿಗಾದರು ನಿನ್ನಿಂದ ಯಾವುದೇ ಸಹಾಯದ ಅಗತ್ಯವಿದೆಯೋ ಅದನ್ನು ಬಹಳ ಪ್ರೀತಿಯಿಂದ ಮಾಡು. ಅದರ ಆ ಸಹಾಯದಿಂದ ನೀನು ಏನನ್ನೂ ಕೂಡ ನಿರೀಕ್ಷಿಸಬೇಡ. ನೀನು ಮಾಡಿದ ಆ ಸಹಾಯ ಯಾವುದೇ ಕಾರಣಕ್ಕೂ ವ್ಯರ್ಥ ಆಗಲಾರದು. ನೀನು ತೊಂದರೆಯಲ್ಲಿದ್ದಾಗ ಅದು ಒಂದಲ್ಲ ಒಂದು ರೂಪದಲ್ಲಿ ಬಂದು ನೆರವಾಗುತ್ತದೆ
**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 06-12-2024 to 12-12-2024 ಬೆಲೆ: 7-00 ಸಂಪುಟ–4 ಸಂಚಿಕೆ–24 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು



ಇಂದು ಹಲವಾರು ರೀತಿಯಲ್ಲಿ ಮಣ್ಣು ಕಲುಷಿತಗೊಂಡಿದೆ. ಇದರ ಹಿನ್ನಲೆಯಲ್ಲಿ ಡಿಸೆಂಬರ್ 5ರಂದು ವಿಶ್ವ ಮಣ್ಣಿನ ದಿನ ಆಚರಿಸಲಾಗುತ್ತಿದೆ. ಮಣ್ಣಿನ ಅಂತರಾಷ್ಟ್ರೀಯ ಒಕ್ಕೂಟ 2002ರಲ್ಲಿ ವಿಶ್ವ ಮಣ್ಣಿನ ದಿನ ಆಚರಣೆಗೆ ಶಿಫಾರಸು ಮಾಡಿತು. 2013ರಲ್ಲಿ ವಿಶ್ವಸಂಸ್ಥೆ ಡಿಸೆಂಬರ್ 5ನ್ನು ವಿಶ್ವ ಮಣ್ಣಿನ ದಿನವನ್ನಾಗಿ ಆಚರಿಸಲು ಅನುಮತಿ ಸೂಚಿಸಿತು. ಮಣ್ಣಿನ ಫಲವತ್ತತೆಯನ್ನು ಕಾಪಾಡುವಲ್ಲಿ ಪ್ರತಿಯೊಬ್ಬ ಕೂಡ ಪಣ ತೊಡಬೇಕಾಗಿದೆ. ಪ್ಲಾಸ್ಟಿಕ್ ಮಣ್ಣನ್ನು ಸೇರುತ್ತಿರುವುದು ಕೂಡ ಮಣ್ಣು ಮಲೀನಗೊಳ್ಳಲು ಪ್ರಮುಖ ಕಾರಣವಾದರೆ, ಇಂದು ಸಾಂಪ್ರಾದಾಯಿಕ ಕೃಷಿ ಕಾಣೆಯಾಗುತ್ತಿದೆ. ರೈತರು ಉಪಯೋಗಿಸುವ ರಾಸಯನಿಕಗಳು ಕೂಡ ಮಣ್ಣಿನ ಫಲವತ್ತತೆಯನ್ನು ಮಲೀನಗೊಳಿಸುತ್ತದೆ ಎನ್ನುತ್ತಾರೆ ವಿಜ್ಞಾನಿಗಳು. ಇದರ ಬಗ್ಗೆ ಗಮನ ಕೊಡಬೇಕಾಗಿದೆ.

## ಪೇಟಾ ಕಿರಿಕಿರಿ: ಪಿಳಿಕುಳ ಕಂಬಳ ಮುಂದಕ್ಕೆ..



**ಬೆಂಗಳೂರು:** ನ.5ರಂದು ಬೆಂಗಳೂರು ಮಹಾನಗರದಲ್ಲಿ ಕಂಬಳ ಆಯೋಜಿಸಲು ಬೆಂಗಳೂರು ಕಂಬಳ ಸಮಿತಿಗೆ ಅನುಮತಿ ನೀಡದಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಪೇಟಾ ಕೋರಿತ್ತು. ಆಗ ರಾಜ್ಯ ಸರ್ಕಾರವು ಬೆಂಗಳೂರಿನಲ್ಲಿ ಕಂಬಳ ಆಯೋಜಿಸುವ ನಿರ್ಧಾರವಾಗಿಲ್ಲ. ಪಿಲಿಕುಳದಲ್ಲಿ ನ. 17ರಂದು ಸ್ಪರ್ಧೆ ನಡೆಸಲಾಗುವುದು ಎಂದು ತಿಳಿಸಿತ್ತು. ಅಲ್ಲಿಂದ ಪೇಟಾದ ಕಣ್ಣು ಪಿಳಿಕುಳ ಕಂಬಳದ ಕಡೆ ತಿರುಗಿತ್ತು. ಪಿಲಿಕುಳದಲ್ಲಿ ಪ್ರಾಣಿ ಸಂಗ್ರಹಾಲಯದ ಸಮೀಪ ಕಂಬಳ ಸ್ಪರ್ಧೆ ಮಾಡಲು **3ನೇ ಪುಟಕ್ಕೆ**

## ನಾವು ಯಾವಾಗಲೂ ಹಿಂದುತ್ವದ ಪರ –ಯತ್ನಾಳ್



**ದೆಹಲಿ:** ನಾವು ಯಾವತ್ತಿದ್ದರೂ ಹಿಂದುತ್ವದ ಪರ ಎಂದು ಬಸವನಗೌಡ ಪಾಟೀಲ್ ಹೇಳಿದರು. ದೆಹಲಿಯಲ್ಲಿ ಶಿಸ್ತು ಸಮಿತಿಯನ್ನು ಬೇಟಿಯಾದ ಬಳಿಕ ಮಾತನಾಡಿ, “ಹೈಕಮಾಂಡ್ ನಾಯಕರು ಮಧ್ಯಪ್ರದೇಶ ಮಾಡಿದ್ದಾರೆ. ಕಾರ್ಯಕರ್ತರ ಭಾವನೆ ಅರಿತು ನಿರ್ಧಾರ ತೆಗೆದುಕೊಳ್ಳಬೇಕು. ನಾವು ಪಕ್ಷ ಬಿಡುವ ಮೂರ್ಖತನದ ಕೆಲಸ ಮಾಡಲ್ಲ. ನಾವು ಅಷ್ಟು ದಡ್ಡರೂ ಅಲ್ಲ. ನಾವು ರಾಷ್ಟ್ರೀಯ ಸಿದ್ಧಾಂತ ಹೊಂದಿದ್ದವರು, ಹಿಂದುತ್ವದ ಪರ. ನಮಗೆ ಬಿಜೆಪಿ ಆಶಾ ಕಿರಣ. ನಾವು ಬಿಜೆಪಿ ಬಿಡುವ ಪ್ರಶ್ನೆಯೇ ಇಲ್ಲ. ಹೊಸ ಪಕ್ಷ ಕಟ್ಟಿ ಸೋತು ಸುಣ್ಣವಾದವರ ಬಗ್ಗೆ **3ನೇ ಪುಟಕ್ಕೆ**

## ರೈತರ ಮಕ್ಕಳು ವೈದ್ಯರಾಗಬೇಕು –ಸಿದ್ದರಾಮಯ್ಯ



**ಬೆಂಗಳೂರು:** ಕಷ್ಟ ಗೊತ್ತಿರುವ ಹಳ್ಳಿಗಾಡಿನ ಮಕ್ಕಳು ಕೂಡ ವೈದ್ಯರಾಗಬೇಕು ಎಂಬಾ ಆಶಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವ್ಯಕ್ತಪಡಿಸಿದರು. ಅವರು ಇಂದು ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯ ಆವರಣದಲ್ಲಿ 500 ಹಾಸಿಗೆಗಳ ಸಾಮರ್ಥ್ಯವುಳ್ಳ ಆಸ್ಪತ್ರೆ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿ, ವೈದ್ಯರು ಕಾಯಿಲೆ ವಾಸಿ ಮಾಡಿದರೆ ಜನ ಸದಾ ನೆನೆಯುತ್ತಾರೆ. ಯಾವುದೇ ಕಾರಣಕ್ಕೂ ವೈದ್ಯರು ರೋಗಿಗಳನ್ನು ನಿರ್ಲಕ್ಷ್ಯ ಮಾಡದೇ ಜಾಗರೂಕತೆಯಿಂದ ನೋಡಿಕೊಳ್ಳಬೇಕು **3ನೇ ಪುಟಕ್ಕೆ**









## ರೈತರ ಮಕ್ಕಳು ವೈದ್ಯರಾಗಬೇಕು– ಸಿದ್ದರಾಮಯ್ಯ

ಒಂದನೇ ಪುಟದಿಂದ......

ಎಂದು ಮುಖ್ಯಮಂತ್ರಿಗಳು ವೈದ್ಯರಿಗೆ ಕರೆ ನೀಡಿದರು. ಬೌರಿಂಗ್ ಆಸ್ಪತ್ರೆ ಸುದೀರ್ಘ ಇತಿಹಾಸವನ್ನು ಹೊಂದಿರುವ ಆಸ್ಪತ್ರೆ. ಸಾವಿರಾರು ಜನರಿಗೆ ಆರೋಗ್ಯ ಸೇವೆಯನ್ನು ಒದಗಿಸಿದೆ. ಹಿಂದೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಬೆಂಗಳೂರಿಗೆ ಮತ್ತೊಂದು ವೈದ್ಯಕೀಯ ಕಾಲೇಜಿನ ಅಗತ್ಯವನ್ನು ಮನಗಂಡು ಮತ್ತೊಂದು ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡಿದೆ ಎಂದರು. ಬೆಂಗಳೂರು ವೇಗವಾಗಿ ಬೆಳೆಯುತ್ತಿದ್ದು ಮತ್ತೊಂದು ವೈದ್ಯಕೀಯ ಕಾಲೇಜು ಅದರ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯೂ ಆಗಿ, ಸಾಮಾನ್ಯಜನರಿಗೆ, ಬಡವರಿಗೆ, ದಲಿತರಿಗೆ ಬಹಳಷ್ಟು ಉಪಯೋಗವಾಗುತ್ತದೆ ಎಂದು ಮನಗಂಡು ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡಿದೆ. ಈಗ ಸುಸಜ್ಜಿತವಾದ ವೈದ್ಯಕೀಯ ಕಾಲೇಜು ನಿರ್ಮಾಣವಾಗಿದೆ ಎಂದರು.

## ನಾವು ಯಾವಾಗಲೂ ಹಿಂದುತ್ವದ ಪರ–ಯತ್ನಾಳ್

ಒಂದನೇ ಪುಟದಿಂದ......

ಯೋಚಿಸಬೇಕಿದೆ. ನಮ್ಮ ವಿಶ್ವಾಸ ಪಕ್ಷ, ಮೋದಿ ಮೇಲಿದೆ. ಅಮಿತ್ ಶಾ ಮತ್ತು ನಡ್ಡಾರನ್ನು ಭೇಟಿಯಾಗಿಲ್ಲ" ಎಂದು ತಿಳಿಸಿದರು. ಶಿಸ್ತು ಸಮಿತಿಯ ಭೇಟಿಗೂ ಮುನ್ನ ಪ್ರತಿಕ್ರಿಯೆ ನೀಡಿದ್ದ ಯತ್ನಾಳ್, "ಆರು ಪುಟಗಳ ಉತ್ತರ ತಯಾರು ಮಾಡಿದ್ದೇನೆ. ಅದನ್ನು ನೀಡುತ್ತೇನೆ, ಜೊತೆಗೆ ವಿವರಣೆ ಕೊಡುತ್ತೇನೆ. ಪಕ್ಷದಲ್ಲಿ ತಟಸ್ಥ ನಿಲುವು ಹೊಂದಿರುವ ನಾಯಕರು ಇದ್ದಾರೆ. ಅವರಿಗೆ ಯಡಿಯೂರಪ್ಪ ಕುಟುಂಬದ ಮೇಲೆ ಆಕ್ರೋಶ ಇದೆ. ಅವರು ಬಹಿರಂಗವಾಗಿ ಮಾತನಾಡುತ್ತಿಲ್ಲ. ಭ್ರಷ್ಟಾಚಾರ ಕುಟುಂಬದ ಕಪಿಮುಷ್ಠಿಯಿಂದ ಹೊರ ಬರಬೇಕು ಎನ್ನುವ ಭಾವನೆ ಎಲ್ಲರಲ್ಲಿದೆ. ಯಾವಕಡೆಗೂ ವಾಲದ ರಾಷ್ಟ್ರೀಯ ನಾಯಕರನ್ನು ಕಳುಹಿಸಿ ಎಲ್ಲರ ಅಭಿಪ್ರಾಯ ಸಂಗ್ರಹಮಾಡಬೇಕು. ವಿಜಯೇಂದ್ರ ಅವರು ಟೀಂ ಮಾಡಿಕೊಂಡು ನಿಷ್ಠಾವಂತ ಕಾರ್ಯಕರ್ತರನ್ನು ಹೇಗೆ ತುಳಿಯುವ ಕೆಲಸ ಮಾಡಿದ್ದಾರೆ. ಹೊಂದಾಣಿಕೆ ರಾಜಕೀಯ, ಕುಟುಂಬ ರಾಜಕೀಯ, ಹಿಂದುತ್ವದಲ್ಲಿ ಹೇಗೆ ರಾಜೀ ಆಗಿದೆ. ಎಲ್ಲವನ್ನೂ ಪತ್ರದಲ್ಲಿ ಬರೆದಿದ್ದೇನೆ. ನಿಷ್ಠಾವಂತ ನಾಯಕರನ್ನು ಬೆಂಗಳೂರಿಗೆ ಕಳುಹಿಸಿದರೆ ಉಳಿದ ದಾಖಲೆ ಕೊಡುತ್ತೇನೆ ಎಂದು ಹೇಳುತ್ತೇನೆ ಎಂದು ಹೇಳಿದ್ದರು. ಶಿಸ್ತು ಸಮಿತಿಯ ಮಾಧ್ಯಮಗಳ ಮುಂದೆ ಬಹಿರಂಗ ಹೇಳಿಕೆ ನೀಡಬೇಡಿ. ಏನೇ ಇದ್ದರೂ ಪಕ್ಷದ ವೇದಿಕೆಯಲ್ಲಿ ಮಾತನಾಡಿ ಎಂದು ಯತ್ನಾಳ್‌ಗೆ ಕಿವಿ ಮಾತು ಹೇಳಿದೆ ಎನ್ನಲಾಗಿದ್ದು, ಇದರಿಂದಾಗಿ ಶಿಸ್ತು ಸಮಿತಿ ಮುಂದೆ ಹಾಜರಾಗಿ ಬಂದ ಮೇಲೆ ಯತ್ನಾಳ್ ಶಾಂತವಾದಂತೆ ಕಂಡುಬರುತ್ತಿದೆ.

## ಪೇಟಾ ಕಿರಿಕಿರಿ: ಪಿಲಿಕುಳ ಕಂಬಳ ಮುಂದಕ್ಕೆ

ಒಂದನೇ ಪುಟದಿಂದ......

ಆಯೋಜಿಸಲಾಗುತ್ತಿದೆ. ಇದರಿಂದ ಅಲ್ಲಿನ ಪ್ರಾಣಿಗಳಿಗೆ ಸಮಸ್ಯೆಯಾಗಲಿದೆ, ಸ್ಥಳ ಬದಲಾಯಿಸ ಬೇಕು ಎಂದು ಕೋರಿತ್ತು. ದಕ್ಷಿಣ ಕನ್ನಡ ಜಿಲ್ಲೆಯ ನಿಸರ್ಗಧಾಮ ಪಿಲಿಕುಳದಲ್ಲಿ ಡಿಸೆಂಬರ್ ತಿಂಗಳಲ್ಲಿ ಕಂಬಳ ಆಯೋಜನೆ ಮಾಡುವುದಿಲ್ಲ ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಮಾಹಿತಿ ನೀಡಿದೆ. ಪೇಟಾ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ.ವಿ.ಅರವಿಂದ್ ಅವರ ವಿಭಾಗೀಯ ಪೀಠವು ನಡೆಸಿತು. ಪೇಟಾ ಪರ ವಕೀಲರು ಮಾಹಿತಿ ನೀಡಿದರು. ಈ ಅಂಶ ದಾಖಲಿಸಿಕೊಂಡ ನ್ಯಾಯಪೀಠ ವಿಚಾರಣೆಯನ್ನುಜನವರಿ 10ಕ್ಕೆ ಮುಂದೂಡಿತು. ವಿಚಾರಣೆ ವೇಳೆ ಸರ್ಕಾರದ ಪರ ವಕೀಲರಾದ ನಿಲೋಫರ್ ಅಕ್ಬರ್, ಪಿಲಿಕುಳದಲ್ಲಿ ಕಂಬಳ ಆಯೋಜನೆಯಿಂದ ಅಲ್ಲಿಯ ನಿಸರ್ಗಧಾಮದಲ್ಲಿನ ಪ್ರಾಣಿಗಳಿಗೆ ತೊಂದರೆಯಾಗಲಿದೆಯೇ ಎಂಬುದರ ಕುರಿತು ಪರಿಶೀಲನೆಗೆ ಸಮಿತಿ ರಚನೆ ಮಾಡಲಾಗಿದೆ. ಈ ಸಮಿತಿ ಇನ್ನೂ ವರದಿಯನ್ನು ಸಲ್ಲಿಸಬೇಕಾಗಿದೆ. ಆದ್ದರಿಂದ ಕಾಲಾವಕಾಶ ನೀಡಬೇಕುಎಂದರು. ಈ ಮಾಹಿತಿ ದಾಖಲಿಸಿಕೊಂಡ ಪೀಠ ವಿಚಾರಣೆ ಮುಂದೂಡಿತು. ಕಳೆದ ವಿಚಾರಣೆ ವೇಳೆ, ರಾಜ್ಯ ಸರ್ಕಾರದ ಪರ ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ಕರಾವಳಿ ಭಾಗದಲ್ಲಿ ಕಂಬಳ ಆಯೋಜನೆ ಮಾಡುವ ಬಗ್ಗೆ ಅರ್ಜಿದಾರರಿಗೆತಕರಾರಿಲ್ಲ. ಪ್ರಾಣಿ ಸಂಗ್ರಹಾಲಯದ ಬಳಿ ಕಂಬಳ ಸ್ಪರ್ಧೆ ನಡೆಸಿದರೆ ಪ್ರಾಣಿಗಳು ತೊಂದರೆ ಅನುಭವಿಸಲಿವೆ ಎನ್ನುವುದು ಅರ್ಜಿದಾರರ ವಾದವಾಗಿದೆ. ಈ ಬಗ್ಗೆ ಪಾಣಿಗಳಿಗೆ ನಿಜವಾಗಿಯೂ ತೊಂದರೆಯಾಗುವ ಬಗ್ಗೆ ತಾಂತ್ರಿಕಅಧ್ಯಯನ ನಡೆಸಲು ನಾಲ್ವರು ತಜ್ಞರ ಸಮಿತಿ ರಚಿಸಲಾಗಿದೆ ಎಂದು ನ್ಯಾಯಪೀಠಕ್ಕೆ ವಿವರಿಸಿದ್ದರು. ಜನತೆ ಆಸೆಯಿಂದ ಕಾಯುತ್ತಿದ್ದ ಪಿಲಿಕುಳ ಕಂಬಳ ಮುಂದೂಡಲ್ಪಟ್ಟಿರುವುದು ಬೇಸರವಾಗಿದೆ ಎನ್ನುತ್ತಾರೆ ಸಾರ್ವಜನಿಕರು.

## ಸಹಾಯಧನಕ್ಕೆ ಅರ್ಜಿ ಆಹ್ವಾನ

ಮಡಿಕೇರಿ – ಪ್ರಸಕ್ತ (2024–25) ಸಾಲಿನ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವತಿಯಿಂದ ಗಿರಿಜನ ಉಪಯೋಜನೆ ಯಡಿಯಲ್ಲಿ ಪರಿಶಿಷ್ಟ ಪಂಗಡ–03 ಘಟಕಗಳಿಗೆ (10+01) ಕುರಿ, ಮೇಕೆ ಘಟಕಗಳ ಶೇಕಡ 90 ರೂ.59,400 ಸಹಾಯಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಹೆಚ್ಚಿನ ಮಾಹಿತಿಗಾಗಿ 9845623137 ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕರಾದ ಲಿಂಗರಾಜ ದೊಡ್ಡಮನಿ ಅವರು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಮಡಿಕೇರಿ – ಪ್ರಸಕ್ತ (2024–25) ಸಾಲಿನಲ್ಲಿ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ ರೂ.25 ಸಾವಿರದಂತೆ ಶಿಷ್ಯವೇತನ ನೀಡಲಾಗುವುದು ಎಂದು ಘೋಷಿಸಲಾಗಿದ್ದು, ಈ ಯೋಜನೆಯಡಿ ಶಿಷ್ಯವೇತನ ಪಡೆಯಲು ಇಚ್ಛಿಸುವವರು ಡಿಸೆಂಬರ್, 14 ರೊಳಗೆ ಅರ್ಜಿ ಸಲ್ಲಿಸಬಹುದು.

## ಖೇಲೋ ಇಂಡಿಯಾ : ಅರ್ಜಿ ಆಹ್ವಾನ

ಮಂಗಳೂರು–ಖೇಲೋ ಇಂಡಿಯಾ ಯೋಜನೆಯಡಿ ರಾಜ್ಯ ಉತ್ಕೃಷ್ಟತಾ ಕೇಂದ್ರಕ್ಕೆ ಗುತ್ತಿಗೆ ಆಧಾರದ ಮೇಲೆ Young Professional ಮತ್ತು Masseur ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಂಗಳಾ ಕ್ರೀಡಾಂಗಣ, ದಕ್ಷಿಣ ಕನ್ನಡ ಜಿಲ್ಲೆ (ದೂರವಾಣಿ –ಸಂಖ್ಯೆ–0824–2451264) ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

ಮಂಗಳೂರು – ಪರಿಶಿಷ್ಟ ವರ್ಗದ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ 2024–25ನೇ ಸಾಲಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಯು ಪರಿಶಿಷ್ಟ ವರ್ಗಕ್ಕೆ ಸೇರಿರಬೇಕು. 1ನೇ ತರಗತಿಯಿಂದ 8ನೇ ತರಗತಿ ವಿದ್ಯಾರ್ಥಿಯ ಪೋಷಕರ ಕುಟುಂಬದ ಆದಾಯಮಿತಿ ವಾರ್ಷಿಕ ರೂ. 6 ಲಕ್ಷಗಳ ಮಿತಿಯೊಳಗೆ ಇರಬೇಕು. 9ನೇ ತರಗತಿಯಿಂದ 10ನೇ ತರಗತಿ ವಿದ್ಯಾರ್ಥಿಯ ಪೋಷಕರ ಕುಟುಂಬದ ಆದಾಯಮಿತಿ ವಾರ್ಷಿಕ ರೂ.2.50 ಲಕ್ಷಗಳ ಮಿತಿಯೊಳಗೆ ಇರಬೇಕು. ಹೆಚ್ಚಿನ ಮಾಹಿತಿಗೆ ಸಹಾಯವಾಣಿ 080–22261789 ಸಂಪರ್ಕಿಸುವಂತೆ ಯೋಜನಾ ಸಮನ್ವಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡ್ರೋನ್ ತರಬೇತಿಗೆ ಅರ್ಜಿ ಆಹ್ವಾನ

ಮಂಗಳೂರು–2024–25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆಯಲ್ಲಿ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವೀಡಿಯೋಗ್ರಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಪರಿಶಿಷ್ಟ ಪಂಗಡದ ಯುವಕ/ಯುವತಿಯರಿಗೆ ಡ್ರೋನ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಯೋಜನಾ ಸಮನ್ವಯಾಧಿಕಾರಿಗಳ ಕಛೇರಿ, ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು (ದೂರವಾಣಿ:0824–2451269) ಕಛೇರಿಯನ್ನು ಸಂಪರ್ಕಿಸುವಂತೆ ಯೋಜನಾ ಸಮನ್ವಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಮಾ ಹಣ ಪಾವತಿಸಲು ಆಯೋಗ ಆದೇಶ

ಶಿವಮೊಗ್ಗ : ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಶ್ರೀಮತಿ ಉಷಾಬಾಯಿ ಬಿನ್ ಬಿ.ಎಂ.ರವಿ ಎಂಬ ವಕೀಲರ ಮೂಲಕ ಆದಿತ್ಯ ಬಿರ್ಲಾ ಹೆಲ್ತ್ ಇನ್ಸೂರೆನ್ಸ್ ಕಂಪನಿ, ಮುಂಬೈ ಮತ್ತು ಫೈನಾನ್ಸ್ ಲಿಮಿಟೆಡ್, ಶಿವಮೊಗ್ಗ ಇವರ ವಿರುದ್ಧ ಸೇವಾ ನ್ಯೂನ್ಯತೆಕುರಿತು ದಾಖಲಿಸಿದ್ದ ಪ್ರಕರಣದಲ್ಲಿ ಜಿಲ್ಲಾ ಆಯೋಗವು ಪರಿಹಾರ ನೀಡಲು ಆದೇಶಿಸಿದೆ.

## ರೈತರನ್ನು ಒಕ್ಕಲೆಬ್ಬಿಸದಂತೆ ಸೂಚನೆ

ಶಿವಮೊಗ್ಗ : ಜಿಲ್ಲೆಯ ಗ್ರಾಮೀಣ ಪ್ರದೇಶಗಳ ಸರ್ಕಾರಿ ಭೂಮಿ ಅಥವಾ ಅರಣ್ಯ ಪ್ರದೇಶಗಳಲ್ಲಿ ಹಲವು ದಶಕಗಳಿಂದ ಸಾಗುವಳಿ ಮಾಡಿಕೊಂಡು ಜೀವನ ಸಾಗಿಸುತ್ತಿರುವ ರೈತರನ್ನಿರು ಒಕ್ಕಲೆ ಬ್ಬಿಸುವ ಹಾಗೂ ನೋಟೀಸ್ ನೀಡಿ ಆತಂಕ ಕ್ಕೀಡುವ ಮಾಡದಂತೆ ಈಗಾಗಲೇ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಎಸ್.ಬಂಗಾರಪ್ಪ ಹೇಳಿದರು.

## ಬಾಂಗ್ಲಾದಲ್ಲಿ ಇಸ್ಕಾನ್ ಮುಖ್ಯಸ್ಥರ ಬಂಧನ: ಪೇಜಾವರಶ್ರೀ ಖಂಡನೆ




ಉಡುಪಿ : ರಾಜದ್ರೋಹದ ಆರೋಪದಲ್ಲಿ ಬಾಂಗ್ಲಾದೇಶದಲ್ಲಿ ಇಸ್ಕಾನ್ ಸಂಸ್ಥೆಯ ಮುಖ್ಯಸ್ಥರನ್ನು ಬಂಧಿಸಿದ್ದಲ್ಲದೇ ಅವರ ಎಲ್ಲಾ ಸೌಲಭ್ಯಗಳನ್ನು ನಿಷೇಧಿಸಿರುವ ಸರಕಾರದ ಕ್ರಮವನ್ನು ಪೇಜಾವರ ಮಠದ ಶ್ರೀವಿಶ್ವಪ್ರಸನ್ನ ತೀರ್ಥರು ಖಂಡಿಸಿದ್ದಾರೆ. ಇದು ಅತ್ಯಂತ ಕಠೋರವಾದ ವಿಚಾರ. ಇದನ್ನು ನಾವು ಖಂಡಿಸುವುದಾಗಿ ತಿಳಿಸಿದ ಸ್ವಾಮೀಜಿ, ಅವರನ್ನು ಬಹುಬೇಗ ವಿಮುಕ್ತಗೊಳಿಸಬೇಕು ಎಂದು ಒತ್ತಾಯಿಸಿದರು. ಬಾಂಗ್ಲಾದೇಶಕ್ಕೆ ಮತ್ತು ಇಸ್ಕಾನ್ ಸಲ್ಲಿಸಿರುವ ಕೊಡುಗೆ ಅತ್ಯ ಪೂರ್ವ. ಹಸಿದವರಿಗೆ ಕಷ್ಟಕಾಲದಲ್ಲಿ ಅನ್ನ ಕೊಟ್ಟ ಸಂಸ್ಥೆ ಅದು. ಈ ಬಗ್ಗೆ ಬಾಂಗ್ಲಾದೇಶ ಅವರಿಗೆ ಸದಾ ಕೃತಜ್ಞರಾಗಿರಬೇಕು, ಈ ಬಗ್ಗೆ ಕೇಂದ್ರ ಸರಕಾರ ಮುತುವರ್ಜಿ ವಹಿಸಿ ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎಂದು ಕೇಂದ್ರ ಸರಕಾರವನ್ನು ಒತ್ತಾಯಿಸುವುದಾಗಿ ತಿಳಿಸಿದರು.

## ಹೆತ್ತವರಿಗೆ ಉಡುಪಿ ಜಿಲ್ಲಾಧಿಕಾರಿ ಮನವಿ



ಉಡುಪಿ : ಜಿಲ್ಲೆಯಲ್ಲಿ ಶಾಲಾ ಹಾಗೂ ಕಾಲೇಜು ಮಕ್ಕಳು ಕೆರೆ, ನದಿ ಹಾಗೂ ಕಿಂಡಿ ಅಣೆಕಟ್ಟಿನ ಹಿನ್ನೀರು ಪ್ರದೇಶಗಳಲ್ಲಿ ಆಟ ಆಡಲು ಅಥವಾ ಈಜಲು ಹೋಗಿ ನೀರಿನಲ್ಲಿ ಮುಳುಗಿ ಪ್ರಾಣ ಬಿಡುವ ಪ್ರಕರಣಗಳು ಇತ್ತೀಚೆಗೆ ಉಡುಪಿ ಜಿಲ್ಲೆಯಲ್ಲಿ ಹೆಚ್ಚು ಹೆಚ್ಚು ವರದಿಯಾಗುತ್ತಿವೆ. ಈ ಹಿನ್ನೆಲೆಯಲ್ಲಿ ಮಕ್ಕಳ ಪೋಷಕರು ಇಂತಹ ವಿಷಯಗಳನ್ನು ನಿರ್ಲಕ್ಷಿಸದೇ, ಗಂಭೀರವಾಗಿ ತೆಗೆದುಕೊಂಡು ಮಕ್ಕಳ ಚಲನವಲನಗಳನ್ನು ಗಮನಿಸಿ, ಸೂಕ್ತ ಎಚ್ಚರಿಕೆ ವಹಿಸಿದಾಗ ಇಂತಹ ಪ್ರಕರಣಗಳನ್ನು ತಡೆಗಟ್ಟಲು ಸಾಧ್ಯ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಟೀಕಿಸುವ ನೈತಿಕತೆ ಬಿಜೆಪಿ ಶಾಸಕರಿಗೆ ಇಲ್ಲ




ಉಡುಪಿ : ರಾಜ್ಯದ ಕಾಂಗ್ರೆಸ್ ಸರಕಾರವನ್ನು, ಜಿಲ್ಲಾ ಉಸ್ತುವಾರಿ ಸಚಿವರನ್ನು ಮತ್ತು ಜಿಲ್ಲಾ ಕೆಡಿಪಿ ಸಭೆಯನ್ನು ಟೀಕಿಸುವ ನೈತಿಕತೆ ಕಾರ್ಕಳ ಶಾಸಕ ಸುನೀಲ್ ಕುಮಾರ್ ಸಹಿತ ಜಿಲ್ಲೆಯ ಬಿಜೆಪಿ ಶಾಸಕರಿಗೆ ಇಲ್ಲ. ತಮ್ಮ ಸಚಿವ ಅವಧಿಯಲ್ಲಿ ಜನಸಾಮಾನ್ಯರ ಸಮಸ್ಯೆಗೆ ಸ್ಪಂದಿಸದವರು ಕಾಂಗ್ರೆಸ್ ಸರಕಾರದ ವಿರುದ್ಧ ಮಾತನಾಡಲು ಯಾವ ಅರ್ಹತೆಯೂ ಇಲ್ಲ, ಉಡುಪಿ ಜಿಲ್ಲೆಯಲ್ಲಿ ಬಿಜೆಪಿ ಸರಕಾರದ ಅವಧಿಯಲ್ಲಿ ನೂರಾರು ಸಮಸ್ಯಗಳಿದ್ದು ಇಂದಿಗೂ ಕೂಡ ಬಿಜೆಪಿಗರ ಅವೈಜ್ಞಾನಿಕ ವ್ಯವಸ್ಥೆಗಳ ಪರಿಣಾಮ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗಿಲ್ಲ ಎಂದು ಉಡುಪಿ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ದೀಪಕ್ ಕೋಟ್ಯಾನ್ ಹೇಳಿದ್ದಾರೆ.

## ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದ ಕೆಯ್ಯೂರಿನ ಆನೆಗಳ ಅಲೆದಾಟ



ಪುತ್ತೂರು: ಇತ್ತೀಚೆಗೆ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದ ಅಕ್ಕ ಪಕ್ಕ ಕಾಡಾನೆಯೊಂದು ಓಡಾಡಿ ಜನರಲ್ಲಿ ಆತಂಕ ಮೂಡಿಸಿದ್ದಲ್ಲದೆ, ಭಾರಿ ಸುದ್ದಿ ಮಾಡಿತ್ತು. ಈಗ ಕೇರಳ ಭಾಗದಿಂದ ಕರ್ನಾಟಕಕ್ಕೆ ಬಂದಿದೆ ಎನ್ನಲಾದ ಕಾಡಾನೆಯ ಹಿಂಡೊಂದು ಪುತ್ತೂರಿನ ಕೆಯ್ಯೂರು ಗ್ರಾಮದ ದೇರ್ಲದಲ್ಲಿ ಡಿ. 3 ರಂದು ರಾತ್ರಿ ಕಾಣಿಸಿಕೊಂಡಿದೆ. ಚಾಕೋಟೆ ಭಾಗದಲ್ಲಿ ಕೃಷಿ ಹಾನಿ ಮಾಡಿದ್ದ ಆನೆಗಳು ಅಲ್ಲಿ ಸಾರ್ವಜನಿಕರು ಗರ್ನಾಲ್ (ಪಟಾಕಿ) ಸಿಡಿಸಿ ಓಡಿಸಲು ಪ್ರಯುತ್ನಿಸಿದ್ದರು. ಅಲ್ಲಿಂದ ನೇರವಾಗಿ ದೇರ್ಲದ ಕಡೆಗೆ ಹೆಜ್ಜೆ ಹಾಕಿದ್ದ ಆನೆಯ ಹಿಂಡು ದೇರ್ಲದ ಗೋಪಾಲಕೃಷ್ಣ ಭಟ್ ಎಂಬವರ ತೋಟಕ್ಕೆ ಲಗ್ಗೆ ಇಟ್ಟು, ತೆಂಗಿನ ಗಿಡಗಳು ಸೇರಿದಂತೆ ಕೃಷಿಗೆ ಹಾನಿ ಮಾಡಿದೆ. ಮಾಡೂರು ಗ್ರಾಮದ ಅಜ್ಜಿಕಲ್ಲು ಎಂಬಲ್ಲಿರುವ ರಬ್ಬರ್ ನಿಗಮಕ್ಕೆ ಸೇರಿದ ರಬ್ಬರ್ ತೋಟಕ್ಕೆ ನುಗ್ಗಿದ ಕಾಡಾನೆಗಳು ರಬ್ಬರ್ ಟಾಪಿಂಗ್ ಶೆಡ್ ಗೆ ನುಗ್ಗಿ ರಬ್ಬರ್ ಪಾತ್ರೆಗಳಿಗೆ ಹಾನಿ ಮಾಡಿದೆ.

## ಸಂತ ಅರ್ಸುಲ ಅಂಗನವಾಡಿ ಕೇಂದ್ರ ಉದ್ಘಾಟನೆ




ಮಂಗಳೂರು : ಮಹಾನಗರ ಪಾಲಿಕೆ ವ್ಯಾಪ್ತಿಯ 45ನೇ ಪೋರ್ಟ್ ವಾರ್ಡ್‌ನ ಪಟೇಲ್ ಕಾಂಪೌಂಡ್ ಹೊಯ್ಗೆ ಬಜಾರ್ ಅತ್ತಾವರ ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ 2022–23 ನೇ ಸಾಲಿನ 16.50 ಲಕ್ಷ ವೆಚ್ಚದಲ್ಲಿ ನೂತನವಾಗಿ ನಿರ್ಮಾಣಗೊಂಡ ಸಂತ ಅರ್ಸುಲ ಅಂಗನವಾಡಿ ಕೇಂದ್ರವನ್ನು ಶಾಸಕ ವೇದವ್ಯಾಸ ಕಾಮತ್ ರವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಹಲವಾರು ವರ್ಷಗಳಿಂದ ಸ್ವಂತ ಅಂಗನವಾಡಿ ಕಟ್ಟಡಕ್ಕೆ ಇಲ್ಲಿನ ನಾಗರಿಕರಿಂದ ಬೇಡಿಕೆ ಇದ್ದು, ಶ್ರೀಮತಿ ಸುಜಾತಾ ಶೆಟ್ಟಿಯವರ ನಿರಂತರ ಪ್ರಯತ್ನವಂತೂ ಶ್ಲಾಘನೀಯ. ಅವರೆಲ್ಲರ ಬೇಡಿಕೆಗನುಸಾರವಾಗಿ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ವಿಶೇಷ ಪ್ರಯತ್ನದ ಮೂಲಕ 16.50 ಲಕ್ಷ ಅನುದಾನ ಬಿಡುಗಡೆಗೊಳಿಸಲಾಗಿತ್ತು. ಅದರ ಫಲವಾಗಿ ಕಟ್ಟಡ ತಲೆ ಎತ್ತಿ ನಿಂತಿದೆ. ಇಲ್ಲಿನ ಮಕ್ಕಳ ಭವಿಷ್ಯ ಉಜ್ವಲವಾಗಿರಲಿ ಎಂದು ಹಾರೈಸಿದರು.

## ಆಳ್ವಾಸ್ ವಿರಾಸತ್ ರಾಷ್ಟ್ರೀಯ ಸಾಂಸ್ಕೃತಿಕ ಉತ್ಸವ




ಮಂಗಳೂರು : ಕರಾವಳಿಯ ಪ್ರತಿಷ್ಠಿತ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನ ಆಯೋಜಿಸುವ 30ನೇ ವರ್ಷದ 'ಆಳ್ವಾಸ್ ವಿರಾಸತ್' ರಾಷ್ಟ್ರೀಯ ಸಾಂಸ್ಕೃತಿಕ ಉತ್ಸವವು ವೈಶಿಷ್ಟ್ಯ ಮೇಳಗಳ ಜೊತೆಗೆ ಡಿ.10ರಿಂದ 15ರ ವರೆಗೆ ಮೂಡುಬಿದಿರೆಯ ಪುತ್ತಿಗೆ ವಿವೇಕಾನಂದ ನಗರದ ಶ್ರೀಮತಿ ವನಜಾಕ್ಷಿ ಕೆ. ಶ್ರೀಪತಿ ಭಟ್ ಬಯಲು ರಂಗಮಂದಿರದಲ್ಲಿ ನಡೆಯಲಿದೆ ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎ ಮೋಹನ್ ಆಳ್ವಾ ಅವರು ತಿಳಿಸಿದ್ದಾರೆ. 30ನೇ ವರ್ಷದ ವಿರಾಸತ್ ಬಹಳ ಮಹತ್ವಪೂರ್ಣವಾಗಿದ್ದು, ವೈವಿಧ್ಯಮಯ ಪತ್ಯಕ್ರಮಗಳ ಮೂಲಕ ವೈಶಿಷ್ಟ ಪೂರ್ಣಗೊಳಿಸಲಾಗಿದೆ. ಸಾಂಸ್ಕೃತಿಕ ವೈಭವದ ಜೊತೆಗಿನ ಮೇಳಗಳು, ಕಲಿಕೆ ಹಾಗೂ ಜೀವನೋಲ್ಲಾಸದ ಸೆಲೆಗಳಾಗಿವೆ ಎಂದರು.

## ಮಂಗಳೂರು ರಿಕ್ಷಾ ಚಾಲಕರಿಂದ ಪ್ರತಿಭಟನೆ




ಮಂಗಳೂರು : ಬ್ಯಾಟರಿ ರಿಕ್ಷಾಗಳಿಗೆ ಮತ್ತಿತರ ರಿಕ್ಷಾಗಳಿಗೆ ಒಂದೇ ರೀತಿಯ ಕಾನೂನು ಜಾರಿಗೆ ಒತ್ತಾಯಿಸಿ, ತಮಿಳುನಾಡು ರಾಜ್ಯ ಸರಕಾರದ ರೀತಿಯಲ್ಲಿ ತಿದ್ದುಪಡಿಗೆ ಆಗ್ರಹಿಸಿ ದ.ಕ. ಜಿಲ್ಲಾ ಅಟೋ ಚಾಲಕರ ಸಂಘ ಹಾಗೂ ಹಾಗೂ ಸಮಾನ ಮನಸ್ಕರ ವೇದಿಕೆ ವತಿಯಿಂದ ನಗರದ ಮಿನಿ ವಿಧಾನ ಸೌಧದ ಮುಂದೆ ಪ್ರತಿಭಟನೆ ನಡೆಯಿತು. ರಿಕ್ಷಾ ಚಾಲಕರು ಬೆಳಗಾವಿಯ ವಿಧಾನಮಂಡಲ ಅಧಿವೇಶನದಲ್ಲಿ ಬೇಡಿಕೆ ಈಡೇರಿಸಬೇಕು ಎಂದು ಆಗ್ರಹಿಸಿದರು.

## ಬಾಂಗ್ಲಾದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯ ಖಂಡಿಸಿ ಪ್ರತಿಭಟನೆ



ಮಂಗಳೂರು: ಬಾಂಗ್ಲಾ ಸೇರಿದಂತೆ ಅಂತರ್ ರಾಷ್ಟ್ರೀಯ ಮಟ್ಟದಲ್ಲಿ ಹಿಂದುಗಳನ್ನು ಗುರಿಯಾಗಿಸಿ ದೌರ್ಜನ್ಯ ನಿರಂತರವಾಗಿ ನಡೆಯುತ್ತಿದೆ. ಹಿಂದುತ್ವ ನಾಶ ಮಾಡ ಬೇಕು ಎನ್ನುವುದು ಬಾಂಗ್ಲಾ ಸಂಚಿನ ಭಾಗವಾಗಿದೆ ಎಂದು ವಿ.ಹೆಚ್.ಪಿ ಪ್ರಾಂತ ಕಾರ್ಯದರ್ಶಿ ಶರಣ್ ಪಂಪ್‌ವೆಲ್ ಹೇಳಿದ್ದಾರೆ.

## ತೀವ್ರ ಮಳೆ : ಸ್ಪೀಕರ್ ಯು.ಟಿ. ಖಾದರ್ ಪರಿಶೀಲನೆ




ಮಂಗಳೂರು: ದ.ಕ.ಜಿಲ್ಲೆಯಲ್ಲಿ ತೀವ್ರ ಮಳೆ ಹಿನ್ನೆಲೆಯಲ್ಲಿ ಸ್ಪೀಕರ್ ಯು.ಟಿ. ಖಾದರ್ ಅವರು ರೋಮ್‌ನಿಂದ ನೇರವಾಗಿ ಕಲ್ಲಿಕೋಟೆ ಮೂಲಕ ಮಂಗಳೂರಿಗೆ ಬಂದು ಜಿಲ್ಲೆಯ ಪ್ರಾಕೃತಿಕ ಸ್ಥಿತಿಗತಿ ಪರಿಶೀಲನೆ ನಡೆಸಿದರು. ಜಿಲ್ಲಾ ಪಂಚಾಯತ್ ನಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು ಜಿಲ್ಲೆಯ ವಿವಿಧ ತಾಲೂಕು ಅಧಿಕಾರಿಗಳಿಂದ ವೀಡಿಯೋ ಸಂವಾದ ಮೂಲಕ ಪ್ರಾಕೃತಿಕ ವಿಕೋಪದ ಮಾಹಿತಿ ಪಡೆದರು. ಪ್ರಕೃತಿ ವಿಕೋಪ ತೀವ್ರವಾಗಿರುವುದರಿಂದ ರೆಸಾರ್ಟ್‌ಗಳಿಗೆ ಬರುವ ಪ್ರವಾಸಿಗರಿಗೆ ವಾಸ್ತವ್ಯ ಹೂಡದಂತೆ ಮನವರಿಕೆ ಮಾಡಬೇಕು. ಒಂದು ವೇಳೆ ರೆಸಾರ್ಟ್‌ನಲ್ಲಿ ತಂಗಿ, ಪ್ರವಾಸಿಗರಿಗೆ ಯಾವುದೇ ಜೀವಹಾನಿಯಾದರೆ ಸಂಬಂಧಪಟ್ಟ ರೆಸಾರ್ಟ್ ಮಾಲೀಕರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಅವರು ಎಚ್ಚರಿಸಿದರು.

## ಹರೇಕಳ ಗ್ರಾಮದಲ್ಲಿ ನ್ಯಾಯಕ್ಕಾಗಿ ಗ್ರಾಮಸ್ಥರ ಮನವಿ



ಕೊಣಾಜೆ: ನೀರಿನ ವಿಚಾರಕ್ಕೆ ಸಂಬಂಧಿಸಿ ಹರೇಕಳ ಗ್ರಾಮದಲ್ಲಿ ನಡೆದ ಹಲ್ಲೆ ಪ್ರಕರಣದ ಸಮಗ್ರ ತನಿಖೆ ನಡೆಸಿ ನ್ಯಾಯ ದೊರಕಿಸುವಂತೆ ಒತ್ತಾಯಿಸಿ ಹಾಗೂ ಪ್ರಚೋದನಕಾರಿ ಹೇಳಿಕೆ ನೀಡಿರುವ ಎಂಎಲ್‌ಸಿ ವಿರುದ್ಧ ಪ್ರಕರಣ ದಾಖಲಿಸುವಂತೆ ಆಗ್ರಹಿಸಿ ಸೋಮವಾರ ಕೊಜಪಾಡಿ ನಿವಾಸಿಗಳು ಗ್ರಾಮ ಪಂಚಾಯಿತಿಗೆ ತೆರಳಿ ಮನವಿ ಮಾಡಿದ್ದಾರೆ. ಹರೇಕಳ ಗ್ರಾಮದ ಎರಡನೇ ವಾರ್ಡ್ ಕೊಜಪಾಡಿ ಸೈಟ್ ನಲ್ಲಿ ಶುಕ್ರವಾರ ನೀರು ಆಪರೇಟರ್ ಹಾಗೂ ಸ್ಥಳೀಯ ನಿವಾಸಿ ಶರತ್ ನಡುವೆ ಹಲ್ಲೆ ಪ್ರಕರಣ ನಡೆದು ಕೊಣಾಜೆ ಠಾಣೆಯಲ್ಲಿ ದೂರು, ಪ್ರತಿದೂರು ದಾಖಲಾಗಿತ್ತು. ಅಲ್ಲದೆ ಗ್ರಾಮ ಪಂಚಾಯಿತಿಯ ಸ್ಥಳೀಯ ಸದಸ್ಯ ಹಾಗೂ ಇತರರ ಮೇಲೂ ಕೇಸು ದಾಖಲಿಸಲಾಗಿತ್ತು.

## ಅಡಿಕೆಯ ಸಂಶೋಧನೆ : ನಿಧಿ ಹಂಚಿಕೆಗೆ ಕೇಂದ್ರಕ್ಕೆ ಕ್ಯಾಂಪ್ಕೊ ಮನವಿ




ಮಂಗಳೂರು: ಅಡಿಕೆಯ ಸುರಕ್ಷತೆ ಮತ್ತು ಅದರ ಕ್ಯಾನ್ಸರ್ ರೋಗ ಶಮನಗೊಳಿಸುವ ಆಯುರ್ವೇದೀಯ ಗುಣಗಳ ಬಗ್ಗೆ ಸಮಗ್ರ ಸಂಶೋಧನೆ ನಡೆಸಬೇಕು ಹಾಗೂ ಇದಕ್ಕಾಗಿ ಮುಂಬರುವ ಬಜೆಟ್‌ನಲ್ಲಿ ನಿಧಿ ಹಂಚಿಕೆ ಮಾಡುವಂತೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಕ್ಯಾಂಪ್ಕೊ ಅಧ್ಯಕ್ಷ ಕಿಶೋರ್ ಕುಮಾರ್ ಕೊಡ್ಗಿ ಮನವಿ ಮಾಡಿದ್ದಾರೆ. ಅಡಿಕೆ ಕೃಷಿ ಲಕ್ಷಾಂತರ ಬೆಳೆಗಾರರಿಗೆ ಜೀವನಾಧಾರವಾಗಿದೆ. ಭಾರತದ ಸಾಂಸ್ಕೃತಿಕ ಜನಜೀವನದಲ್ಲಿ ಮತ್ತು ಆರ್ಥಿಕ ಕ್ಷೇತ್ರದಲ್ಲಿ ಅಡಿಕೆಯು ಮಹತ್ತರ ಪಾತ್ರವನ್ನು ವಹಿಸಿರುವುದರ ಕುರಿತು ಹಣಕಾಸು ಸಚಿವರಿಗೆ ಬರೆದ ಪತ್ರದಲ್ಲಿ ಕ್ಯಾಂಪ್ಕೊ ಅಧ್ಯಕ್ಷರು ವಿವರಿಸಿದ್ದಾರೆ. ಭಾರತದಲ್ಲಿ ಸುಮಾರು 9.55ಲಕ್ಷ ಹೆಕ್ಟೇರ್‌ಗಳಿಗೆ ಅಡಿಕೆ ಕೃಷಿ ವಿಸ್ತರಿಸಿದ್ದು, ವಾರ್ಷಿಕವಾಗಿ 14ರಿಂದ 18ಲಕ್ಷ ಮೆಟ್ರಿಕ್ ಟನ್‌ಗಳಷ್ಟು ಅಡಿಕೆಯ ಉತ್ಪಾದನೆಯಾಗುತ್ತಿದೆ. ಕೇಂದ್ರ ಸರಕಾರ ಜಿಎಸ್ಟಿ ಪದ್ಧತಿ ಜಾರಿ ಗೊಳಿಸಿದಂದಿನಿಂದ ಈವರೆಗೆ ಬರೇ ಕ್ಯಾಂಪ್ಕೊ ಒಂದೇ ಸಂಸ್ಥೆ ಸು. 650 ಕೋಟಿ ರೂಪಾಯಿ ತೆರಿಗೆ ಯನ್ನು ಪಾವತಿಸುತ್ತಿದೆ ಎಂದು ಕೊಡ್ಗಿ ತಿಳಿಸಿದ್ದಾರೆ.

## ಸರಕಾರದ ಯೋಜನೆ ಅರ್ಹರಿಗೆ ಸಿಗುವಂತಾಗಲಿ : ಅಶೋಕ್ ರೈ



ಉಪ್ಪಿನಂಗಡಿ: ರಾಜ್ಯ ಸರಕಾರ ಕೃಷಿಕರ ಅಭಿವೃದ್ಧಿಗಾಗಿ ಹಾಗೂ ಕೃಷಿ ಕಾರ್ಯದಲ್ಲಿ ಆಧುನಿಕತೆಯನ್ನು ಅಳವಡಿಸಿಕೊಳ್ಳು ವುದಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದು, ಈ ಯೋಜನೆಗಳು ಅರ್ಹ ಬಡವರಿಗೆ ಸಿಗುವಂತಾಗಬೇಕು. ಸರಕಾರದ ಉದ್ದೇಶ ಬಡ ರೈತರನ್ನು ತಲುಪುವುದಾಗಿದೆ. ಆದರೆ ಬಡ ರೈತರಿಗೆ ಇದರ ಬಗ್ಗೆ ಯಾವುದೇ ಮಾಹಿತಿ ಇಲ್ಲದೆ ಸವಲತ್ತುಗಳು ಅವರನ್ನು ತಲುಪುತ್ತಿಲ್ಲ ಎನ್ನುವುದು ಗಮನಕ್ಕೆ ಬಂದಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚಿನ ಕಾಳಜಿ ವಹಿಸಬೇಕೆಂದರಲ್ಲದೆ, ಕರಾವಳಿಯ ಭಾಗದ ಕೃಷಿಕರಿಂದ ಯಾವುದಕ್ಕೆ ಹೆಚ್ಚಿನ ಬೇಡಿಕೆ ಇದೆ. ಅಂತಹ ಸಾಮಗ್ರಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ತಂದು ಕೊಡುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು ಎಂದ ಪುತ್ತೂರು ಶಾಸಕ ಅಶೋಕ್ ಕುಮಾರ್ ರೈ ತಿಳಿಸಿದರು.

## ಅಗ್ರವಾಲ್ ಎತ್ತಂಗಡಿಯಾಗದೆ ವಿರಮಿಸುವುದಿಲ್ಲ : ಮುನೀರ್ ಕಾಟಿಪಳ್ಳ




ಮಂಗಳೂರು : ಪ್ರತಿಭಟನೆ, ಧರಣಿಗಳಿಗೆ ಅನುಮತಿ ನಿರಾಕರಿಸುತ್ತಿರುವ, ಜನಪರ ಸಂಘಟನೆಗಳ ಮೇಲೆ ಸರಣಿ ಮೊಕದ್ದಮೆ ಹೂಡುತ್ತಿರುವ ಮಂಗಳೂರು ಪೊಲೀಸ್ ಕಮೀಷನರ್ ಅನುಪಮ್ ಅಗ್ರವಾಲ್ ವಿರುದ್ಧ ಶಿಸ್ತುಕ್ರಮ ಜರುಗಿಸಬೇಕು, ಮಂಗಳೂರು ನಗರದಿಂದ ಅವರನ್ನು ವರ್ಗಾಯಿಸಬೇಕು ಎಂದು ಒತ್ತಾಯಿಸಿ ಸಿಪಿಐ(ಎಂ) ದ.ಕ. ಜಿಲ್ಲಾ ಸಮಿತಿ ವತಿಯಿಂದ ನಗರದ ಕ್ಲಾಕ್ ಟವರ್ ಮುಂಭಾಗ ಪ್ರತಿಭಟನಾ ಸಭೆ ನಡೆಯಿತು. ಜನಸಾಮಾನ್ಯರು ಹಕ್ಕಿಗಳಿಗಾಗಿ, ತಮಗಾಗುತ್ತಿರುವ ಅನ್ಯಾಯಗಳ ವಿರುದ್ಧ ಶಾಂತಿಯುತವಾಗಿ ಪ್ರತಿಭಟಿಸುವ ಹಕ್ಕನ್ನೇ ನಿಷೇಧಿಸುವ ಕಮೀಷನರ್ ಅಗ್ರವಾಲ್ ನಡೆಯನ್ನು ಯಾವುದೇ ಕಾರಣಕ್ಕೂ ಒಪ್ಪಿಕೊಳ್ಳಲು ಸಾಧ್ಯವಿಲ್ಲ' ಎಂದು ಮುನೀರ್ ಕಾಟಿಪಳ್ಳ ಹೇಳಿದರು.

## ನೆಕ್ಕಿಲಾಡಿಯಲ್ಲಿ ಬಿಜೆಪಿ ಪ್ರತಿಭಟನೆ



ಉಪ್ಪಿನಂಗಡಿ: ಈಗಿನ ರಾಜ್ಯ ಸರಕಾರ ಆರ್ಥಿಕವಾಗಿ ದಿವಾಳಿಯಾಗಿದ್ದು, ಗುತ್ತಿಗೆದಾರರಿಗೆ 10 ಪೈಸೆ ಹಣವೂ ನೀಡಿಲ್ಲ. ಆದ್ದರಿಂದ ಎಲ್ಲಾ ಕಾಮಗಾರಿಗಳು ಅಪೂರ್ಣವಾಗಿಯೇ ಉಳಿಯುವಂತಾಗಿದೆ ಎಂದು ಮಾಜಿ ಶಾಸಕ ಸಂಜೀವ ಮಠಂದೂರು ತಿಳಿಸಿದರು. 34 ನೆಕ್ಕಿಲಾಡಿ–ಬೊಳುವಾರು ರಾಜ್ಯ ಹೆದ್ದಾರಿಯಲ್ಲಿ 34 ನೆಕ್ಕಿಲಾಡಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಚತುಷ್ಪಥ ರಾಜ್ಯ ಹೆದ್ದಾರಿ ನಿರ್ಮಾಣ ಕಾಮಗಾರಿ ವಿಳಂಬವಾಗಿದೆ ಎಂದು ಆರೋಪಿಸಿ 34 ನೆಕ್ಕಿಲಾಡಿಯ ಆದರ್ಶನಗರದ ಬಳಿ ನಡೆದ ಪ್ರತಿಭಟನೆಯಲ್ಲಿ ರಾಜ್ಯ ಹೆದ್ದಾರಿ ತಡೆ ನಡೆಸಿ, ಅವರು ಮಾತನಾಡುತ್ತಿದ್ದರು. ಇದು ಸಾಂಕೇತಿಕ ಪ್ರತಿಭಟನೆಯಷ್ಟೇ ನಾವು ಕೊಟ್ಟ ಗಡುವಿನೊಳಗೆ ಕಾಮಗಾರಿ ಮುಗಿಸದಿದ್ದರೆ ಉಗ್ರಹೋರಾಟ ಮಾಡಲಾಗುವುದು ಎಂದರು.

## ಅನಕ್ಷರಸ್ಥ ಕಾರ್ಮಿಕರಿಗೆ ಸಮಸ್ಯೆ–ಎಚ್. ನರಸಿಂಹ




ಕುಂದಾಪುರ : ಕಟ್ಟಡ ಕಾರ್ಮಿಕರು ತಮ್ಮ ಸಂಘಟನೆಯ ಧೀರ್ಘ ಹೋರಾಟಗಳಿಂದ ಸೌಲಭ್ಯಗಳನ್ನು ಪಡೆದಿದ್ದಾರೆ. ಇತ್ತೀಚಿನ ಕೆಲವು ಡಿಜಿಟಲೀಕರಣದ ನೀತಿಗಳಿಂದಾಗಿ ತಮ್ಮ ಮಕ್ಕಳ ಶೈಕ್ಷಣಿಕ ಧನಸಹಾಯಕ್ಕಾಗಿ ಅಲೆದಾಡಿದರೂ ಸಕಾಲಕ್ಕೆ ಶೈಕ್ಷಣಿಕ ಧನಸಹಾಯ ಸಿಗುವಲ್ಲಿ ಸಮಸ್ಯೆ ಎದುರಾಗಿದೆ. ಇದು ಅನಕ್ಷರಸ್ಥ ಕಾರ್ಮಿಕರನ್ನು ಮತ್ತಷ್ಟು ಸಂಕಷ್ಟಕ್ಕೆ ಒಳಪಡಿಸಿದೆ. ಸರಕಾರದ ಇಂತಹ ನೀತಿಗಳು ಕಾರ್ಮಿಕರಿಗೆ ಸಹಾಯಕವಾಗಿರುವಂತೆ ರೂಪಿಸಬೇಕು ಎಂದು ಸಿಐಟಿಯು ಜಿಲ್ಲಾ ಮುಖಂಡ ಎಚ್.ನರಸಿಂಹ ಹೇಳಿದರು.

# ಸುದ್ದಿ ತುಣುಕು

ಕರ್ನಾಟಕದ ಪ್ರಸಿದ್ಧ ದೇವಾಲಯಗಳಲ್ಲಿ ಒಂದಾದ ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವರ ಚಂಪಾ ಷಷ್ಠಿ ಜಾತ್ರಾ ಮಹೋತ್ಸವ ನಡೆಯಲಿದೆ. ಇಲ್ಲಿನ ರಥವನ್ನು ಮಲೆಕುಡಿಯ ಜನಾಂಗದವರು ಬೆತ್ತಗಳಿಂದ ನಿರ್ಮಿಸುತ್ತಿದ್ದಾರೆ.

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಸಿಸೇರಿಯನ್‌ಗೆ ಒಳಗಾಗಿದ್ದ ಮತ್ತೋರ್ವ ಬಾಣಂತಿ ಚಿಕಿತ್ಸೆಗೆ ಸ್ಪಂದಿಸದೇ ಮೃತಪಟ್ಟಿದ್ದಾರೆ.

ಕಾಂಗ್ರೆಸ್ ಕಿತ್ತು ಹಾಕಲು ನಿಮ್ಮ ಹಣೆಯಲ್ಲಿಯೂ ಬರೆದಿಲ್ಲ. ಸಿದ್ದರಾಮಯ್ಯನ ಹಿಂದೆ ನಾನು ಬಂಡೆಯಾಗಿ ನಿಲ್ಲುತ್ತೇನೆ. ಈಗಲೂ ಇದ್ದೇನೆ, ನಾಳೆಯೂ ಇರುತ್ತೇನೆ. ಸಾಯುವವರೆಗೂ ಇರುತ್ತೇನೆ ಎಂದು ಡಿಕೆ ಶಿವಕುಮಾರ್ ಜನಕಲ್ಯಾಣ ಸಮಾವೇಶದಲ್ಲಿ ಹೇಳಿದ್ದಾರೆ.

"ಒಕ್ಕಲಿಗ ನಾಯಕರನ್ನು ಮುಗಿಸಲು ಹೊರಟಿದ್ದ ದೇವೇಗೌಡರು ಪಾಪದ ಹೊರೆ ಹೊರಬೇಕಾಗುತ್ತದೆ ಎಂದು ಅಂದು ಕೃಷ್ಣಪ್ಪ ಹೇಳಿದ್ದರು. ಈಗ ಅದು ನಿಜವಾಗಿದೆ" ಎಂದು ಸಿಎಂ ಸಿದ್ದರಾಮಯ್ಯ ದೇವೇಗೌಡರ ವಿರುದ್ಧ ಗುಡುಗಿದರು.

ಸುವರ್ಣಸೌಧದಲ್ಲಿ ನಡೆಯುವ ಚಳಿಗಾಲದ ಅಧಿವೇಶನದ ಹಿನ್ನೆಲೆಯಲ್ಲಿ ಇಂಡಿಗೋ ಏರ್ ಲೈನ್ಸ್ ಸಂಸ್ಥೆಯು ಡಿಸೆಂಬರ್ 9ರಿಂದ 19ರವರೆಗೆ ಬೆಂಗಳೂರು – ಬೆಳಗಾವಿ ನಡುವೆ ವಿಶೇಷ ವಿಮಾನ ಸಂಚಾರ ಆರಂಭಿಸುತ್ತಿದೆ.

ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ, ನಿಗಮಗಳಿಗೆ ಅನುದಾನ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಬಿಜೆಪಿ ಮುಖಂಡ ಹಾಗು ಮಾಜಿ ಸಚಿವ ರಮೇಶ್ ಜಾರಕಿಹೊಳಿ ಮಾತನಾಡುತ್ತಾ, ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ವಿಜಯೇಂದ್ರ ಅರ್ಹರಲ್ಲ ಎಂದರು.

ಪ್ರವಾಸೋದ್ಯಮ ಅಭಿವೃದ್ಧಿ ಮತ್ತು ರೈತರ ಅನುಕೂಲಕ್ಕಾಗಿ ಹಾಸನ ವಿಮಾನ ನಿಲ್ದಾಣದ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಬೇಕೆಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ರಾಜ್ಯಸಭೆಯಲ್ಲಿ ಮನವಿ ಮಾಡಿದರು.

ಬೆಂಗಳೂರಲ್ಲಿ ಭಯೋತ್ಪಾದ ಕೃತ್ಯ ಎಸಗಲು ಶಸ್ತ್ರಾಸ್ತ್ರ ಸಂಗ್ರಹ ಆರೋಪದ ಮೇಲೆ ಶಂಕಿತ ಉಗ್ರನನ್ನು ಎನ್‌ಐಎ ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದೆ.

ಬೆಂಗಳೂರಿನ ಕೋರಮಂಗಲದ ಬಳಿ ಅತ್ಯಾಧುನಿಕ ಸ್ಮಾರ್ಟ್ ಬಸ್ ನಿಲ್ದಾಣವನ್ನು ಸಾರ್ವಜನಿಕರಿಗೆ ಸಮರ್ಪಿಸಲಾಗಿದ್ದು, ಸುಸಜ್ಜಿತ ಈ ಬಸ್ ನಿಲ್ದಾಣವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಯಿತು.

ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪನವರ ವಿರುದ್ಧ ಶಿವಮೊಗ್ಗ ನಗರದಲ್ಲಿ ಮತ್ತೊಂದು ಸುಮೊಟೊ ಪ್ರಕರಣ ದಾಖಲಾಗಿದೆ. ಪ್ರಚೋದನಕಾರಿ ಭಾಷಣ ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ಕೋಟೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

2ಎ ಮೀಸಲಾತಿಗೆ ಆಗ್ರಹಿಸಿ ಮತ್ತೆ ಪಂಚಮಸಾಲಿ ಸಮಾಜ ಸಿಡಿದೆದ್ದಿದೆ. ಚಳಿಗಾಲ ಅಧಿವೇಶನದ ವೇಳೆ ಕೂಡಲಸಂಗಮದ ಲಿಂಗಾಯತ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಬೃಹತ್ ಟ್ರ್ಯಾಕ್ಟರ್ ರ‍್ಯಾಲಿಗೆ ಸಿದ್ಧತೆ ನಡೆದಿದೆ.

ಪಕ್ಷದೊಳಗಿನ ಭಿನ್ನಮತ ಹಾಗೂ ಗುಂಪುಗಾರಿಕೆ ಹಾಗೂ ಬಸನಗೌಡ ಪಾಟೀಲ್ ಯತ್ನಾಳ್ ವಿಷಯದ ಕುರಿತು ಹೈಕಮಾಂಡ್ ಮಧ್ಯಪ್ರವೇಶಿಸಿ ಎಲ್ಲವನ್ನೂ ಸುಸೂತ್ರವಾಗಿ ಬಗೆಹರಿಸುವ ಭರವಸೆಯಿದೆ ಎಂದು ಬಿ.ಎಸ್.ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ಹಾಗಲಕಾಯಿ ಗೊಜ್ಜು



**ಬೇಕಾಗುವ ಪದಾರ್ಥಗಳು :**

ಹಾಗಲಕಾಯಿ – 2
ಉದ್ದಿನ ಬೇಳೆ – 1 ಚಮಚ
ಎಳ್ಳು – 2 ಚಮಚ
ಮೆಂತ್ಯೆ – ಕಾಲು ಚಮಚ
ಒಣ ಕೊಬ್ಬರಿ – 1 ಬಟ್ಟಲು
ಒಣಮೆಣಸಿನಕಾಯಿ – 10
ಹುಣಸೆಹಣ್ಣು – ರುಚಿಗೆ
ಬೆಲ್ಲ – ಸ್ವಲ್ಪ
ಉಪ್ಪು – ರುಚಿಗೆ ತಕ್ಕಷ್ಟು
ಅರಶಿನ – ಚಿಟಿಕೆ
ಇಂಗು – ಸ್ವಲ್ಪ
ತೆಂಗಿನೆಣ್ಣೆ – 1 ಚಮಚ
ಸಾಸಿವೆ – 1 ಚಮಚ
ಬೆಳ್ಳುಳ್ಳಿ – 3 ಎಸಳು

**ಮಾಡುವ ವಿಧಾನ :**

ಮೊದಲಿಗೆ ಉದ್ದಿನಬೇಳೆ, ಮೆಂತ್ಯೆ, ಎಳ್ಳು, ಒಣಕೊಬ್ಬರಿ, ಒಣಗಿದ ಮೆಣಸಿನಕಾಯಿ ಎಲ್ಲವನ್ನು ಬೇರೆಬೇರೆಯಾಗಿ ಹುರಿದು ಮಿಕ್ಸಿ ಜಾರ್‌ಗೆ ಹಾಕಿ ಪುಡಿ ಮಾಡಿಕೊಳ್ಳಬೇಕು. ನಂತರ ಹಾಗಲಕಾಯಿಯನ್ನು ತೊಳೆದು, ಒರೆಸಿ, ಬೀಜ ತೆಗೆದು ಸಣ್ಣ ಹೋಳುಗಳಾಗಿ ಹೆಚ್ಚಿ ಎಣ್ಣೆಯಲ್ಲಿ ಕರಿದುಕೊಳ್ಳಬೇಕು. ನಂತರ ಕರಿದ ಹಾಗಲಕಾಯಿಗೆ ಹುಣಸೆರಸ, ಪುಡಿ ಮಾಡಿಕೊಂಡ ಮಿಶ್ರಣ, ಉಪ್ಪು, ಚಿಟಿಕೆ ಅರಿಶಿನ, ಇಂಗು ಎಲ್ಲವನ್ನು ಹಾಕಿ ಚೆನ್ನಾಗಿ ಕುದಿಸಿಕೊಳ್ಳಬೇಕು. ಈಗ ಒಂದು ಬಾಣಲೆಯಲ್ಲಿ 1 ಚಮಚ ಎಣ್ಣೆ ಕಾಯಿಸಿ, ಸಾಸಿವೆ, ಬೆಳ್ಳುಳ್ಳಿ ಹಾಕಿ ಒಗ್ಗರಣೆ ಮಾಡಿದರೆ ರುಚಿಕರವಾದ ಹಾಗಲಕಾಯಿ ಗೊಜ್ಜು ಸಿದ್ಧ.

## ಬಾಂಗ್ಲಾ ಹಿಂದೂ ನಾಯಕ ಕೃಷ್ಣದಾಸ್‌ಗಿಲ್ಲ ಜಾಮೀನು



ಢಾಕಾ : ದೇಶದ್ರೋಹ, ಭಯೋತ್ಪಾದನೆಗೆ ಕುಮ್ಮಕ್ಕು ನೀಡಿದ ಆರೋಪಗಳಡಿ ಬಾಂಗ್ಲಾದೇಶದಲ್ಲಿ ಬಂಧಿತರಾಗಿರುವ ಹಿಂದೂ ನಾಯಕ ಚಿನ್ಮಯಿ ಕೃಷ್ಣದಾಸ್ ಅವರ ಜಾಮೀನು ಅರ್ಜಿ ಮತ್ತೊಮ್ಮೆ ತಿರಸ್ಕೃತವಾಗಿದೆ. ಅಲ್ಲಿನ ನ್ಯಾಯಾಲಯವು 2025ರ ಜನವರಿ 2ಕ್ಕೆ ವಿಚಾರಣೆ ಮುಂದೂಡಿದೆ. ಬೆದರಿಕೆಗೆ ಹೆದರಿ ಯಾವ ವಕೀಲರೂ ಹಿಂದೂ ನಾಯಕನ ಪರವಾಗಿ ವಾದ ಮಾಡಲು ಮುಂದೆ ಬರುತ್ತಿಲ್ಲ. ಈಗಾಗಲೇ ದಾಸ್ ಅವರ ವಕೀಲನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಲಾಗಿದೆ.

## ಹಮಾಸ್‌ಗೆ ಡೊನಾಲ್ಡ್ ಟ್ರಂಪ್ ಅಂತಿಮ ಎಚ್ಚರಿಕೆ



ಯುಎಸ್‌ಎ: ಜನವರಿಯಲ್ಲಿ ತಾವು ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಳ್ಳುವ ಮುನ್ನವೇ ಗಾಜಾದಲ್ಲಿ ಬಂಧಿಯಾಗಿರಿಸಿಕೊಂಡಿರುವ ಎಲ್ಲಾ ಇಸ್ರೇಲ್ ಒತ್ತೆಯಾಳುಗಳನ್ನು ಬಿಡುಗಡೆ ಮಾಡಬೇಕೆಂದು ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಯೋತ್ಪಾದಕ ಸಂಘಟನೆ ಹಮಾಸ್‌ಗೆ ಅಂತಿಮ ಎಚ್ಚರಿಕೆ ನೀಡಿದ್ದಾರೆ. ಕದನ ವಿರಾಮ ಒಪ್ಪಂದ ಜಾರಿಗೆ ತರಲು ಬೈಡನ್ ಆಡಳಿತವು ಕಳೆದ ವರ್ಷದಿಂದ ಇಸ್ರೇಲ್, ಕತಾರ್ ಮತ್ತು ಈಜಿಪ್ಟ್ ಸೇರಿದಂತೆ ಅಂತಾರಾಷ್ಟ್ರೀಯ ಮಧ್ಯಸ್ಥಗಾರರೊಂದಿಗೆ ಮಾತುಕತೆ ನಡೆಸುತ್ತಿದೆ.

## ಪಾಕಿಸ್ಥಾನದಲ್ಲಿ ಭುಗಿಲೆದ್ದ ಆಂತರಿಕ ಸಂಘರ್ಷ



ಪಾಕಿಸ್ಥಾನ: ಪಾಕಿಸ್ತಾನದ ಖೈಬರ್ ಕಣಿವೆಯ ಪಖ್ತುಂಖ್ವಾ, ಬಲೂಚಿಸ್ತಾನ್ ಮತ್ತು ಪಂಜಾಬ್‌ನಲ್ಲಿ ಸೇನೆ ಭಯೋತ್ಪಾದಕರ ವಿರುದ್ಧ ಭರ್ಜರಿ ಕಾರ್ಯಾಚರಣೆ ಕೈಗೊಂಡಿದೆ. ಇದರಲ್ಲಿ 16 ಉಗ್ರರನ್ನು ಕೊಂದು ಹಾಕಿದೆ. ಇದೇ ವೇಳೆ ಕಾರ್ಯಾಚರಣೆ ವೇಳೆ ನಾಲ್ವರು ಯೋಧರು ಅಸು ನೀಗಿದ್ದಾರೆ. ಉಗ್ರಗಾಮಿಗಳ ವಿರುದ್ಧ ಪಾಕ್ ಸೇನೆ ಉದ್ದೇಶಿತ ಕಾರ್ಯಾಚರಣೆಗಳನ್ನು ನಡೆಸಿತು ಎಂದು ಡಾನ್ ವರದಿ ಮಾಡಿದೆ.

## ಸಿರಿಯಾ ಸಂಘರ್ಷ ಮತ್ತಷ್ಟು ಭೀಕರ



ಡಮಾಸ್ಕಸ್: ಉತ್ತರದ ಅಲೆಪ್ಪೊ ಮತ್ತು ಇದ್ಲಿಬ್ ಪ್ರಾಂತ್ಯಗಳಲ್ಲಿ ಬಂಡುಕೋರ ಪಡೆಗಳ ವಿರುದ್ಧದ ಕಾರ್ಯಾಚರಣೆಯನ್ನು ತೀವ್ರಗೊಳಿಸಿರುವುದಾಗಿ ಸಿರಿಯನ್ ಸೇನೆ ಪ್ರಕಟಿಸಿದ್ದು, ರಷ್ಯಾದ ಪಡೆಗಳ ಬೆಂಬಲದೊಂದಿಗೆ ಕಳೆದ 24 ಗಂಟೆಗಳಲ್ಲಿ 400ಕ್ಕೂ ಹೆಚ್ಚು ಉಗ್ರರನ್ನು ಹತ್ಯೆಗೈಯ್ಯಲಾಗಿದೆ ಎಂದು ಹೇಳಿಕೊಂಡಿದೆ. ನಿಖರವಾದ ದಾಳಿಯಲ್ಲಿ ವಿವಿಧ ದೇಶಗಳಿಗೆ ಸೇರಿದ 400ಕ್ಕೂ ಹೆಚ್ಚು ಉಗ್ರರನ್ನು ನಿರ್ಮೂಲನೆ ಮಾಡಲಾಗಿದೆ ಎಂದು ಸೇನೆ ತಿಳಿಸಿದೆ.

## ಹಿಜ್ಬುಲ್ಲಾದಿಂದ ಕದನವಿರಾಮ ಉಲ್ಲಂಘನೆ ಆರೋಪ



ಇಸ್ರೇಲ್: ಕಳೆದ ಎರಡು ದಿನಗಳಲ್ಲಿ ಇಸ್ರೇಲ್ ಲೆಬನಾನ್ ಮೇಲೆ ಹಲವಾರು ದಾಳಿಗಳನ್ನು ನಡೆಸಿದೆ. ಹಿಜ್ಬುಲ್ಲಾ ಕದನವಿರಾಮ ಉಲ್ಲಂಘಿಸಿರುವುದರಿಂದ ಲೆಬನಾನ್ ಮೇಲೆ ದಾಳಿ ನಡೆಸಿರುವುದಾಗಿ ಇಸ್ರೇಲ್ ಹೇಳಿಕೊಂಡಿದೆ. ಹಿಜ್ಬುಲ್ಲಾ ಉಗ್ರರು ಅಡಗಿದ್ದ ಚರ್ಚ್ ಮೇಲೆ ದಾಳಿ ನಡೆಸಿರುವುದಾಗಿ ಸೇನೆ ತಿಳಿಸಿದೆ. ಉಗ್ರರು ಚರ್ಚ್‌ನಿಂದ ಇಸ್ರೇಲ್ ಪಡೆಗಳ ಮೇಲೆ ಗುಂಡು ಹಾರಿಸಿದ ನಂತರ ತಾನು ಪ್ರತಿದಾಳಿ ನಡೆಸಿರುವುದಾಗಿ ಇಸ್ರೇಲ್ ಹೇಳಿದೆ.

## ಎಫ್‌ಬಿಐ ಮುಖ್ಯಸ್ಥರಾಗಿ ಕಾಶ್ ಪಟೇಲ್ ನೇಮ



ವಾಷಿಂಗ್ಟನ್: ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್ (ಎಫ್‌ಬಿಐ)ನ ನಿರ್ದೇಶಕರಾಗಿ ಕಾಶ್ ಪಟೇಲ್ ಅವರ ಹೆಸರನ್ನು ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈಗಾಗಲೇ ಘೋಷಿಸಿದ್ದಾರೆ. ಈ ಮೂಲಕ ಭಾರತೀಯ-ಅಮೆರಿಕನ್ ಸಂಜಾತ ಪೆಂಟಗನ್ ಅಧಿಕಾರಿಯಾಗಿರುವ ಕಶ್ಯಪ್ 'ಕಾಶ್' ಪಟೇಲ್ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಡಳಿತದ ಅಡಿಯಲ್ಲಿ ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್‌ನ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಲಿದ್ದಾರೆ.

## ಮುಂದುವರಿದ ಇಸ್ರೇಲ್ ವೈಮಾನಿಕ ದಾಳಿ



ಗಾಜಾ : ಉತ್ತರ ಗಾಜಾ ಪಟ್ಟಿಯ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 15 ಪ್ಯಾಲೆಸ್ತೀನಿಯನ್ನರು ಮೃತಪಟ್ಟಿದ್ದಾರೆ ಎಂದು ಪ್ಯಾಲೆಸ್ತೈನ್ ಮೂಲಗಳು ತಿಳಿಸಿವೆ. ಸ್ಥಳೀಯ ಮೂಲಗಳು ಮತ್ತು ಪ್ರತ್ಯಕ್ಷದರ್ಶಿಗಳ ಪ್ರಕಾರ, ಇಸ್ರೇಲ್‌ನ ಯುದ್ಧವಿಮಾನಗಳು ಬೀಟ್ ಲಾಹಿಯಾ ಪಟ್ಟಣದಲ್ಲಿರುವ ವಸತಿ ಗೃಹವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿವೆ ಎಂದು ಹೇಳಿದ್ದಾರೆ.

## ಚಿನ್ನದ ಪದಕದ ಬರ ನೀಗಿಸಿಕೊಂಡ ಪಿ.ವಿ.ಸಿಂಧು



ಉತ್ತರ ಪ್ರದೇಶ: ಲಕ್ನೋದಲ್ಲಿ ಆಯೋಜಿಸಲಾದ ಸೈಯದ್ ಮೋದಿ ಇಂಟರ್‌ನ್ಯಾಶನಲ್ ಟೂರ್ನಮೆಂಟ್‌ನಲ್ಲಿ ನಡೆದ ಮಹಿಳೆಯರ ಸಿಂಗಲ್ಸ್ ಫೈನಲ್ ಪಂದ್ಯದಲ್ಲಿ ಭಾರತದ ಸ್ಟಾರ್ ಆಟಗಾರ್ತಿ ಪಿ.ವಿ.ಸಿಂಧು ಚೀನಾದ ಆಟಗಾರ್ತಿ ಲುವೊ ಯು ವು ವಿರುದ್ಧ ಜಯ ಸಾಧಿಸಿ ಪ್ರಶಸ್ತಿ ಮುಡಿಗೇರಿಸಿಕೊಂಡರು. ಫೈನಲ್ ಪಂದ್ಯದಲ್ಲಿ ಆರಂಭದಿಂದಲೂ ಆಕ್ರಮಣಕಾರಿ ಆಟಕ್ಕೆ ಮುಂದಾದ ಸಿಂಧು, ಚೀನಾ ಆಟಗಾರ್ತಿಗೆ ಎರಡೂ ಸೆಟ್‌ಗಳಲ್ಲಿ ತಿರುಗೇಟು ನೀಡುವ ಅವಕಾಶವನ್ನು ನೀಡಲಿಲ್ಲ. ಮೊದಲ ಸೆಟ್‌ನಿಂದಲೇ ಚೀನಾದ ಆಟಗಾರ್ತಿ ಲುವೊ ಯು ವು ಮೇಲೆ ಒತ್ತಡ ಹೇರಿದ ಸಿಂಧು 21-14ರಿಂದ ಮೊದಲ ಸೆಟ್ ಗೆದ್ದರು.

## ಆಸ್ಟ್ರೇಲಿಯಾ ವಿರುದ್ಧ ಮುಗ್ಗರಿಸಿದ ಟೀಂ ಇಂಡಿಯಾ



ಬ್ರಿಸ್ಬನ್: ಭಾರತ ಮತ್ತು ಆಸ್ಟ್ರೇಲಿಯಾ ಮಹಿಳಾ ಕ್ರಿಕೆಟ್ ತಂಡಗಳ ನಡುವಿನ ಐಸಿಸಿ ಮಹಿಳಾ ಚಾಂಪಿಯನ್ಸ್ ಟೂರ್ನಿ ಆರಂಭವಾಗಿದೆ. ಇಂದಿನ ಮೊದಲ ಪಂದ್ಯದಲ್ಲಿ ಟೀಂ ಇಂಡಿಯಾ ಹೀನಾಯವಾಗಿ ಸೋಲನುಭವಿಸಿತು. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ದುಕೊಂಡ ಭಾರತದ ಮಹಿಳೆಯರು ನಿರೀಕ್ಷೆಗೆ ತಕ್ಕ ಪ್ರದರ್ಶನ ನೀಡುವಲ್ಲಿ ವಿಫಲರಾದರು. ಕೇವಲ 100 ರನ್‌ಗಳಿಗೆ ಆಲೌಟ್ ಆದರು. ಸಾಮಾನ್ಯ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ ಕೇವಲ 16.2 ಓವರ್‌ಗಳಲ್ಲೇ ಗುರಿ ತಲುಪಿತು.

## 37 ಸಿಕ್ಸರ್,18 ಬೌಂಡರಿ,349 ರನ್ : ವಿಶ್ವ ದಾಖಲೆ



ಹೈದರಾಬಾದ್ : ಸೈಯದ್ ಮುಷ್ತಾಕ್ ಅಲಿ ಟ್ರೋಫಿ ಭಾಗವಾಗಿ ನಡೆದ ಬರೋಡಾ ಮತ್ತು ಸಿಕ್ಕಿಂ ತಂಡಗಳ ನುಡವಿನ ಟಿ20 ಪಂದ್ಯದಲ್ಲಿ ಕೃನಾಲ್ ಪಾಂಡ್ಯ ನೇತೃತ್ವದ ಬರೋಡಾ ವಿಶ್ವ ದಾಖಲೆ ನಿರ್ಮಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ್ದ ಬರೋಡಾ ನಿಗದಿತ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 349 ರನ್ ಗಳಿಸಿತು. ಇದರೊಂದಿಗೆ ಒಟ್ಟಾರೆ ಟಿ20 ಸ್ವರೂಪದಲ್ಲಿ ಅತೀ ಹೆಚ್ಚು ಸ್ಕೋರ್ ದಾಖಲಿಸಿ ಇತಿಹಾಸ ನಿರ್ಮಿಸಿತು. ಇದುವರೆಗೆ ಈ ದಾಖಲೆ ಜಿಂಬಾಬ್ವೆ ಹೆಸರಿನಲ್ಲಿತ್ತು.

## ಅಧಿವೇಶನದ ನಂತರ ಪೌರಕಾರ್ಮಿಕರ ಸಮಸ್ಯೆಗಳಿಗೆ ಪರಿಹಾರ



ಬೆಂಗಳೂರು: "ಪೌರಕಾರ್ಮಿಕರ ಬಗ್ಗೆ ನಮಗೆ ಸಹಾನುಭೂತಿ ಇದೆ. ಬೆಳಗಾವಿ ಅಧಿವೇಶನದ ಬಳಿಕ ನಿಮ್ಮ ಸಮಸ್ಯೆಗಳಿಗೆ ಪರಿಹಾರ ನೀಡಲಾಗುವುದು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಭರವಸೆ ನೀಡಿದರು. ಐಪಿಡಿ ಸಾಲಪ್ಪ ವರದಿ ಜಾರಿ ಸೇರಿದಂತೆ ಅನೇಕ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಇಂದು ಫ್ರೀಡಂ ಪಾರ್ಕ್‌ನಲ್ಲಿ ಧರಣಿ ಮಾಡುತ್ತಿದ್ದ ಪೌರಕಾರ್ಮಿಕರನ್ನು ಭೇಟಿ ಮಾಡಿದ ಅವರು, ಮಾತುಕತೆ ನಡೆಸಿದರು.

## ವಿದ್ಯಾರ್ಥಿಗಳಿಗೆ ಸಂವಿಧಾನ ಬೋಧಿಸಿದ ಸಿದ್ದರಾಮಯ್ಯ



ಬೆಂಗಳೂರು: 'ಸಂವಿಧಾನದ ಓದು' ಪ್ರಬಂಧ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಹುಮಾನ ವಿತರಿಸಿದರು. ಬಳಿಕ ಒಂದು ಗಂಟೆ ಸಂವಿಧಾನ ಕುರಿತು ಸ್ವಾರಸ್ಯಕರ ಸಂಗತಿಗಳನ್ನು ಹಂಚಿಕೊಂಡರು. ಸಂವಿಧಾನದ್ರೋಹಿಗಳು, ಸಮಾಜದ್ರೋಹಿಗಳು ಜನ ವಿರೋಧಿಗಳೂ ಕೂಡ ಹೌದು. ಜಾತಿ, ಧರ್ಮದ ಹೆಸರಲ್ಲಿ ಒಬ್ಬರನ್ನು ಅಗೌರವದಿಂದ ಕಾಣುವುದು, ಮತ್ತೊಬ್ಬರು ಸಂವಿಧಾನೇತರ ಗೌರವ ನಿರೀಕ್ಷಿಸುವುದು ತಪ್ಪು ಎಂದರು.

## ನಿರ್ಮಲಾ, ನಡ್ಡಾ, ವಿಜಯೇಂದ್ರಗೆ ರಿಲೀಫ್



ಬೆಂಗಳೂರು: ಜಾರಿ ನಿರ್ದೇಶನಾಲಯವನ್ನು ದುರ್ಬಳಕೆ ಮಾಡಿಕೊಂಡು ಚುನಾವಣಾ ಬಾಂಡ್ ಹೆಸರಿನಲ್ಲಿ ಸುಲಿಗೆ ಮಾಡಿರುವ ಆರೋಪದ ಮೇಲೆ ಬೆಂಗಳೂರಿನ ತಿಲಕ್ ನಗರ ಪೊಲೀಸ್ ಠಾಣೆಯಲ್ಲಿ ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್, ಜೆ.ಪಿ.ನಡ್ಡಾ, ವಿಜಯೇಂದ್ರ ಸೇರಿದಂತೆ ಮತ್ತಿತರರ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಅನ್ನು ಹೈಕೋರ್ಟ್ ರದ್ದುಪಡಿಸಿತು. ನಳಿನ್ ಕುಮಾರ್ ಕಟೀಲ್ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

## ವಿಕಲ ಚೇತನರ ಶ್ರೇಯೋಭಿವೃದ್ಧಿಗೆ 44 ಕೋಟಿ ರೂಪಾಯಿ



ಬೆಂಗಳೂರು: ವಿಕಲಚೇತನರು ಸಮಾಜಕ್ಕೆ ಹೊರೆಯಲ್ಲ, ಅವರು ಸಮಾಜದ ಆಸ್ತಿ. ವಿಕಲಚೇತನರ ಸಬಲೀಕರಣಕ್ಕಾಗಿ ಸರ್ಕಾರ ಬದ್ಧವಾಗಿದೆ. ಅವರ ಶ್ರೇಯೋಭಿವೃದ್ಧಿಗಾಗಿ ಪ್ರಸಕ್ತ ಸಾಲಿನ ಪೂರಕ ಅಂದಾಜಿನಲ್ಲಿ 44 ಕೋಟಿ ರೂ ಮಂಜೂರು ಮಾಡುತ್ತೇನೆ, ರಾಜ್ಯದಲ್ಲಿ ಸುಮಾರು 15ಲಕ್ಷ ವಿಕಲಚೇತನರಿದ್ದಾರೆ. ಇವರೆಲ್ಲರನ್ನು ಆರೈಕೆ ಮಾಡಿ ವಿಶೇಷ ಸೌಲಭ್ಯಗಳನ್ನು ನೀಡುವುದು ಸರ್ಕಾರದ ಕರ್ತವ್ಯ ಎಂದು ಸಿದ್ದರಾಮಯ್ಯ ಘೋಷಿಸಿದರು.

## ಬಂಡೀಪುರದಲ್ಲಿ ದೇಶದ ಮೊದಲ ಶ್ವಾನ ತರಬೇತಿ ಕೇಂದ್ರ



ಚಾಮರಾಜನಗರ: ಕಳ್ಳಬೇಟೆ ಮತ್ತು ಅರಣ್ಯ ಸಂಪತ್ತು ಲೂಟಿ ತಡೆಯಲು ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಶ್ವಾನ ತರಬೇತಿ ಕೇಂದ್ರ ತೆರೆಯಲಾಗಿದೆ. ಇದು ದೇಶದ ಮೊದಲ ಕೇಂದ್ರವಾಗಿದೆ. ಶ್ವಾನ ತರಬೇತಿ ನೂತನ ಕೇಂದ್ರವನ್ನು ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಉದ್ಘಾಟಿಸಿದ್ದಾರೆ. ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಹೆಚ್ಚಾಗಿ ಬಳಸಿಕೊಳ್ಳಲಾಗುತ್ತಿದ್ದ ಬೆಲ್ಜಿಯಂ ಶೆಪರ್ಡ್ ಶ್ವಾನಗಳನ್ನು ಈಗ ಅರಣ್ಯ ಕಾವಲಿಗೆ ಬಳಸಲು ನಿರ್ಧರಿಸಿದೆ.

## ತಂಬಾಕು ಬೆಳೆ ಫಸಲ್ ಭೀಮಾ ವ್ಯಾಪ್ತಿಗೆ : ಕೇಂದ್ರಕ್ಕೆ ಮನವಿ



ನವದೆಹಲಿ: ತಂಬಾಕು ಬೆಳೆಯನ್ನು ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯ ವ್ಯಾಪ್ತಿಗೆ ತರಬೇಕು ಹಾಗೂ ಬೆಂಬಲ ಬೆಲೆ ನೀಡಬೇಕು. ಈ ಸಂಬಂಧ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವರಾದ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಯಿತು. ನಮ್ಮ ಮನವಿಗೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ.

## ಮಲೀನವಾದ ವೃಷಭಾವತಿ ನದಿ : ಸ್ವಚ್ಛಕ್ಕೆ ಮುಂದಾದ ಬೆಂಗಳೂರು ವಿವಿ



ಬೆಂಗಳೂರು: ಕಲುಷಿತ ನೀರಿನಿಂದ ಮಲೀನವಾಗಿರುವ ವೃಷಭಾವತಿ ನದಿಯನ್ನು ಸ್ವಚ್ಛಗೊಳಿಸುವ ನಿಟ್ಟಿನಲ್ಲಿ ಬೆಂಗಳೂರು ವಿಶ್ವವಿದ್ಯಾಲಯ ಮುಂದಾಗಿದ್ದು, ನೀಲನಕ್ಷೆಗೆ ಸಿದ್ಧಪಡಿಸಲು ಸಕಲ ತಯಾರಿ ನಡೆಸುತ್ತಿದೆ. ನದಿಯ ನೀರನ್ನು ಸ್ವಚ್ಛಗೊಳಿಸುವ ಕಾರ್ಯಕ್ಕೆ ಬೆಂಗಳೂರು ವಿಶ್ವವಿದ್ಯಾಲಯ ವಿಜ್ಞಾನ ವಿಭಾಗದ ಡೀನ್ ಪಿಎಂಇಬಿ ನಿರ್ದೇಶಕ ಪ್ರೊ.ಅಶೋಕ್ ಡಿ.ಹಂಜರಗಿ ನೇತೃತ್ವದ ತಂಡವನ್ನು ರಚಿಸಲಾಗಿದೆ. ಉಪಕುಲಪತಿ ಸೇರಿದಂತೆ ಸಿಬ್ಬಂದಿ ಈ ತಂಡದಲ್ಲಿ ಸಕ್ರಿಯ ಪಾತ್ರ ವಹಿಸಲಿದ್ದಾರೆ.

## ರಾಜ್ಯ ಸರ್ಕಾರ ರೈತರ ಜೊತೆ ಆಡುತ್ತಿರುವ ಆಟ ಬಿಡಬೇಕು–ಕಾರಜೋಳ



ಬಾಗಲಕೋಟೆ: "ರಾಜ್ಯ ಸರ್ಕಾರ ರೈತರ ಜೊತೆ ಆಡುತ್ತಿರುವ ಬುಗುರಿ ಆಟ ಬಿಡಬೇಕು. ಈ ಬುಡುಬುಡಿಕೆ ಆಟ ನಡೆಯಂಗಿಲ್ಲ. ರೈತರಿಗೆ ಕೊಡಬೇಕಾಗಿರುವುದನ್ನು ಕೊಡಬೇಕು" ಎಂದು ಚಿತ್ರದುರ್ಗದ ಸಂಸದ ಗೋವಿಂದ ಕಾರಜೋಳ ವಾಗ್ದಾಳಿ ನಡೆಸಿದರು. ಮುಳುಗಡೆ ಸಂತ್ರಸ್ತರಿಗೆ ಹೋರಾಟ ಮಾಡಲು ಬಿಡುತ್ತೇವೆ ಎಂದರೆ ಸರ್ಕಾರಕ್ಕೆ ಇದೊಂದು ಕಪ್ಪು ಚುಕ್ಕೆ. ಯಾವುದೇ ಕಾರಣಕ್ಕೂ ರೈತರು ಬೀದಿಗೆ ಬರಲು ಬಿಡಬಾರದು" ಎಂದರು.

## ಅಕ್ರಮ ಅಫೀಮು ಬೆಳೆ ನಾಶ



ಇಂಫಾಲ್: ಮಣಿಪುರ ಪೊಲೀಸರು ಸೇರಿದಂತೆ ವಿವಿಧ ಕಾನೂನು ಜಾರಿ ಸಂಸ್ಥೆಗಳು 2017ರಿಂದ 2024ರ ನಡುವೆ ರಾಜ್ಯದ 12 ಜಿಲ್ಲೆಗಳ 19,135.60 ಎಕರೆ ಪ್ರದೇಶದಲ್ಲಿ ಅಕ್ರಮವಾಗಿ ಬೆಳೆಯಲಾದ ಅಫೀಮು ಬೆ0ಳೆಯನ್ನು ನಾಶಪಡಿಸಿವೆ, ಕಳೆದ ಏಳು ವರ್ಷಗಳಲ್ಲಿ (2017–2024) ಅತ್ಯಧಿಕ 4,454.4 ಎಕರೆ ಅಕ್ರಮ ಅಫೀಮು ಬೆಳೆಯನ್ನು ನಾಶಪಡಿಸಲಾಗಿದೆ ಎಂದು ಅಧಿಕೃತ ವರದಿಯೊಂದು ತಿಳಿಸಿದೆ.

## ಜಾಕೋಬೈಟ್ ಚರ್ಚ್‌ಗೆ ಸುಪ್ರೀಂ ಕೋರ್ಟ್ ಆದೇಶ



ನವದೆಹಲಿ: ಕೇರಳದ ಎರ್ನಾಕುಲಂ ಮತ್ತು ಪಾಲಕ್ಕಾಡ್ ಜಿಲ್ಲೆಗಳಲ್ಲಿನ ತಲಾ ಮೂರು ಚರ್ಚ್‌ಗಳ ಆಡಳಿತವನ್ನು ಆರ್ಥೊಡಾಕ್ಸ್ ಚರ್ಚ್‌ಗೆ ಹಸ್ತಾಂತರಿಸುವಂತೆ ಸುಪ್ರೀಂ ಕೋರ್ಟ್ ಜಾಕೋಬೈಟ್ ಚರ್ಚ್ ಆಡಳಿತ ಮಂಡಳಿ ಸದಸ್ಯರಿಗೆ ಆದೇಶಿಸಿದೆ. 1934ರ ಸಂವಿಧಾನದ ಪ್ರಕಾರ ಚರ್ಚ್‌ಗಳನ್ನು ಮಲಂಕರ ಆರ್ಥೊಡಾಕ್ಸ್ ಸಿರಿಯನ್ ಚರ್ಚ್‌ಗೆ ಹಸ್ತಾಂತರಿಸುವ ಬಗೆಗಿನ ತೀರ್ಪುಗಳನ್ನು ಉದ್ದೇಶಪೂರ್ವಕವಾಗಿ ಉಲ್ಲಂಘಿಸಿದ್ದಕ್ಕಾಗಿ ನ್ಯಾಯಾಂಗ ನಿಂದನೆ ಎಸಗಲಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿತು.

## ಮಾಜಿ ಸಿಎಂ ಸುಖಬೀರ್ ಬಾದಲ್‌ಗೆ ಧಾರ್ಮಿಕ ಶಿಕ್ಷೆ



ಅಮೃತಸರ: ಧಾರ್ಮಿಕ ದುರ್ವರ್ತನೆ ನಡತೆ ತೋರಿದ್ದಕ್ಕಾಗಿ ಮಾಜಿ ಮುಖ್ಯಮಂತ್ರಿ ಸುಖಬೀರ್ ಸಿಂಗ್ ಬಾದಲ್‌ಗೆ ಧಾರ್ಮಿಕ ಶಿಕ್ಷೆ ನೀಡಲಾಗಿದೆ. 'ತಂಖಾಹ್' ಎಂದು ಕರೆಯಲ್ಪಡುವ ಅಕಾಲ್ ತಖ್ತ್ ಜತೇದಾರ್ ಗ್ಯಾನಿ ರಘಬೀರ್ ಸಿಂಗ್ ನೇತೃತ್ವದ ಐವರು ಪ್ರಧಾನ ಅರ್ಚಕರು ಶಿಕ್ಷೆ ಘೋಷಿಸಿದ್ದಾರೆ. ಬಾದಲ್ ಅವರು ಅಮೃತಸರದ ಸ್ವರ್ಣ ಮಂದಿರದಲ್ಲಿ ಪಾತ್ರೆಗಳು ಮತ್ತು ಬೂಟುಗಳನ್ನು ಸ್ವಚ್ಛಗೊಳಿಸಬೇಕಿದೆ.

## ಬಾಂಗ್ಲಾ ಬಿಕ್ಕಟ್ಟು ಪರಿಹರಿಸಲು ವಿಶ್ವಸಂಸ್ಥೆ ಮಧ್ಯಪ್ರವೇಶಿಸಲಿ–ಬ್ಯಾನರ್ಜಿ



ಕೋಲ್ಕತಾ: ನೆರೆಯ ಬಾಂಗ್ಲಾದೇಶದಲ್ಲಿ ಉಂಟಾಗಿರುವ ಬಿಕ್ಕಟ್ಟಿನ ಪರಿಹಾರಕ್ಕೆ ವಿಶ್ವಸಂಸ್ಥೆ ಮಧ್ಯಪ್ರವೇಶಿಸಬೇಕು ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಆಗ್ರಹಿಸಿದ್ದಾರೆ. ವಿಶ್ವಸಂಸ್ಥೆಯ ಮಧ್ಯಪ್ರವೇಶದ ನಂತರ ಬಾಂಗ್ಲಾದೇಶದಲ್ಲಿ ಶಾಂತಿಪಾಲನಾ ಪಡೆಗಳನ್ನು ನಿಯೋಜಿಸುವ ಪ್ರಸ್ತಾಪವನ್ನು ಪರಿಶೀಲಿಸಬೇಕೆಂದು ಕೇಂದ್ರಸರ್ಕಾರಕ್ಕೆ ಕೋರಿದ್ದಾರೆ. ಅವರು ತಾವು ಮಂಡಿಸಿದ ಪ್ರಸ್ತಾಪಗಳಿಗೆ ಕಾರಣಗಳನ್ನು ಸಹ ವಿವರಿಸಿದ್ದಾರೆ.

## ಭಾರತದ ಸೌರ ಶಕ್ತಿಗೆ ಆನೆ ಬಲ ನೀಡುವ ಸ್ಥಾವರ



ಗುಜರಾತ್: ಜಗತ್ತಿನ ಅತ್ಯಂತ ದೊಡ್ಡ ನವೀಕರಿಸಬಹುದಾದ ಶಕ್ತಿ ಘಟಕ ಭಾರತದ ಪಶ್ಚಿಮ ಬಯಲಿನಲ್ಲಿದೆ. ಈ ಪ್ರದೇಶದಲ್ಲಿ ದೊಡ್ಡದಾದ ಗಾಳಿಯನ್ನು ಶಕ್ತಿಯಾಗಿ ರೂಪಿಸುವ ಸೌರ ಫಲಿಕಗಳು ಗಾಳಿ ಟರ್ಬೈನ್‌ಗಳನ್ನು ನಿರ್ಮಾಣ ಮಾಡಲಾಗಿದೆ. ಈ ನವೀಕರಿಸಬಹುದಾದ ಸೌರ ಶಕ್ತಿ ಬಳಕೆಗೆ ಉತ್ತೇಜಿಸಲಾಗುತ್ತಿದೆ. ಗುಜರಾತ್‌ನ ಖಾವ್ಡಾದಲ್ಲಿ 538 ಚದರ ಕಿ.ಮೀ ವಿಸ್ತರ್ಣದಲ್ಲಿ ಹರಡಿರುವ ಈ ಅತ್ಯಂತ ಬೃಹತ್ ಸೌರ ಘಟಕದಲ್ಲಿ 60 ಮಿಲಿಯನ್ ಸೌರ ಫಲಕ ಹಾಗೂ 770 ಗಾಳಿ ಟರ್ಬೈನ್‌ಗಳಿವೆ.




# ನನಗೆ ನಿರ್ಮಾಪಕ ಅಪ್ಪನಂತಿದ್ದರೆ ನಿರ್ದೇಶಕ ಅಮ್ಮನಂತೆ –ಕಾನ್ಫಿಡದಲ್ಲಿ ಹಿರಿಯ ನಟಿ ತಾರಾ



ಬೆಂಗಳೂರಿನ ಕೊಂಡಜ್ಜಿ ಬಸಪ್ಪ ಸಭಾಭವನದಲ್ಲಿ ಕಾನ್ಫಿಡ ಎಂದೇ ಪ್ರಸಿದ್ಧಿಯಾಗಿರುವ ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ ಅಯೋಜಿಸಿದ್ದ, ಭಾರತೀಯ ಚಿತ್ರರಂಗದ ದಿಗ್ಗಜರಾದ ದಿವಂಗತ ಪುಟ್ಟಣ್ಣ ಕಣಗಾಲ್ ಅವರ ಜಯಂತಿ ಆಚರಣೆ ಸಂದರ್ಭದಲ್ಲಿ ಹಿರಿಯನಟಿ ತಾರ ಅನುರಾಧ ಮಾತನಾಡಿ, ಇಲ್ಲಿ ಕೆಟ್ಟ ನಿರ್ದೇಶಕರು, ಒಳ್ಳೆ ನಿರ್ದೇಶಕರು ಇಲ್ಲ. ಎಲ್ಲರೂ ಒಂದಲ್ಲ ಒಂದು ರೀತಿಯಲ್ಲಿ ಪಾಠ ಹೇಳಿಕೊಟ್ಟವರೆ. ನನಗೆ ನಿರ್ಮಾಪಕ ಅಪ್ಪನಂತಿದ್ದರೆ, ನಿರ್ದೇಶಕ ನನಗೆ ಅಮ್ಮನಿದ್ದಂತೆ ಎಂದರು. ವಿಶ್ವನಾಥ್ ನೇತ್ರತ್ವದಲ್ಲಿ ನಿರ್ದೇಶಕರ ಸಂಘ ಉತ್ತಮ ಕೆಲಸ ಮಾಡುತ್ತಿದೆ. ನಾನು ಎಂದಿಗೂ ಸಂಘದ ಜೊತೆ ಇದ್ದೇನೆ ಎಂದು ಕಾರ್ಯಕ್ರಮಕ್ಕೆ ಶುಭ ಹಾರೈಸಿದರು. ಈ ಸಮಾರಂಭದಲ್ಲಿ ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಸದಸ್ಯರ ಕುಟುಂಬ



ಸ್ಥರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಕೂಡ ಏರ್ಪಡಿಸಲಾಗಿತ್ತು. ಎನ್ನಾರ್ ಕೆ ವಿಶ್ವನಾಥ್ ಅವರ ಅಧ್ಯಕ್ಷತೆಯಲ್ಲಿ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಹಿರಿಯ ನಿರ್ದೇಶಕ ಸಾಯಿಪ್ರಕಾಶ್, ಹಿರಿಯ ನಟ ನಿರ್ದೇಶಕ , ನಟ ಶ್ರೀನಿವಾಸ್ ಮೂರ್ತಿ, ಕೆಎಫ್‌ಸಿಸಿ ಮಾಜಿ ಅಧ್ಯಕ್ಷ ಕೆ ವಿ ಚಂದ್ರಶೇಖರ್, ಉಪಾಧ್ಯಕ್ಷ ನರಸಿಂಹಲು, ಹಿರಿಯ ಕಲಾವಿದ ಶಿವಕುಮಾರ್, ನಟಿ ಶ್ರೀರಕ್ಷಾ ಶಿವಕುಮಾರ್, ಚಲನಚಿತ್ರ ಪತ್ರಕರ್ತರ ಸಂಘದ ಅಧ್ಯಕ್ಷ ಸುಬ್ರಹ್ಮಣ್ಯ ಬಾಡೂರು, ಪುಟ್ಟಣ ಕಣಗಾಲ್ ಪ್ರತಿಷ್ಠಾನದ ಅಧ್ಯಕ್ಷ ಸುಂದರೇಶ್, ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಜೆ ಜಿ ಕೃಷ್ಣ ನಿರ್ಮಾಪಕರ ಸಂಘದ ಕಾರ್ಯದರ್ಶಿ ಪ್ರವೀಣ್, ಚಲನಚಿತ್ರ ನಿರ್ದೇಶಕ ಶಶಿಕಾಂತ್ ಗಟ್ಟಿ, ವೈಧ್ಯಾ ಧಿಕಾರಿ ಭುಜಬಲಿ, ಜಯಶೇಖರ್ ಮುಂತಾದವರು ಈ ಕಾರ್ಯಕ್ರಮಕ್ಕೆ ಶುಭ ಹಾರೈಸಿದರು.

## ಉಪ್ಪಿ "ರಕ್ತ ಕಾಶ್ಮೀರ" ತೆರೆಗೆ..

ಎಮ್‌ಡಿಎಮ್ ಪ್ರೊಡಕ್ಷನ್ ಲಾಂಛನದಲ್ಲಿ ನಿರ್ಮಾಣವಾಗಿರುವ, ಹಿರಿಯ ನಿರ್ದೇಶಕ ಎಸ್ ವಿ ರಾಜೇಂದ್ರ ಸಿಂಗ್ ಬಾಬು ನಿರ್ದೇಶನದ ಹಾಗೂ ರಿಯಲ್ ಸ್ಟಾರ್ ಉಪೇಂದ್ರ ಹಾಗೂ ರಮ್ಯ ಮುಖ್ಯಪಾತ್ರದಲ್ಲಿ ನಟಿಸಿರುವ "ರಕ್ತ ಕಾಶ್ಮೀರ" ಚಿತ್ರ ತೆರೆಗೆ ಬರಲು ಅಣಿಯಾಗಿದೆ. ಪಾಕ್ ಆಕ್ರಮಿತ ಕಾಶ್ಮೀರವನ್ನು ವಾಪಸ್ ಪಡೆಯುವ ಪ್ರಧಾನಿ ಮೋದಿ ಅವರ ಹೇಳಿಕೆಯನ್ನು ಈ ಚಿತ್ರದಲ್ಲಿ ಬಳಸಿಕೊಳ್ಳಲಾಗಿದೆ. ಗಡಿ ಪ್ರದೇಶ ಅಷ್ಟೇ ಅಲ್ಲ. ಬೆಂಗಳೂರಿನಲ್ಲೂ ಉಗ್ರಗಾಮಿಗಳ ಕಾಟವಿದೆ. ಅದರ ನಿರ್ಮೂಲನೆಗೆ ಸಂಬಂಧಿಸಿದ ಕಥಾವಸ್ತುವನ್ನೂ ಈ ಚಿತ್ರ ಹೊಂದಿದೆ. ಎಸ್ ವಿ ರಾಜೇಂದ್ರಸಿಂಗ್ ಬಾಬು ಅವರೆ ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದಿದ್ದು, ಸಂಭಾಷಣೆ ಎಂ. ಎಸ್ ರಮೇಶ್ ಅವರದು. ಗುರುಕಿರಣ್ ಸಂಗೀತ ನಿರ್ದೇಶನದ ಈ ಚಿತ್ರದಲ್ಲಿ ಉಪೇಂದ್ರ, ರಮ್ಯ, ದೊಡ್ಡಣ್ಣ, ಓಂಪ್ರಕಾಶ್ ರಾವ್, ಅನಿಲ ಮುಂತಾದವರಿದ್ದಾರೆ.



## ಸ್ಟೈಲ್ ಐಕಾನ್ ಚುಂಬಿಸಿದ ಪಟಾಕಾ..

ಸ್ಯಾಂಡಲ್‌ವುಡ್ ಪಟಾಕಾ ಫುಲ್ ಖುಷಿಯಲ್ಲಿದ್ದಾರೆ. ಕನ್ನಡದಿಂದ ನಟನಾ ಜರ್ನಿ ಆರಂಬಿಸಿದ್ದ ನಭಾ ನಟೇಶ್ ಈಗ ಪ್ಯಾನ್ ಇಂಡಿಯಾ ಪ್ರಾಜೆಕ್ಟ್‌ಗಳಲ್ಲಿ ಬ್ಯುಸಿಯಾಗಿದ್ದಾರೆ. ಶೃಂಗೇರಿ ಮೂಲದ ಈ ನಟಿ ಸದ್ಯ ತೆಲುಗು ಚಿತ್ರರಂಗದ ಟಾಪ್ ನಟಿಯರಲ್ಲಿ ಒಬ್ಬರಾಗಿ ಗುರುತಿಸಿಕೊಂಡಿದ್ದಾರೆ. ಒಂದರ ಹಿಂದೊಂದು ಸಿನಿಮಾಗಳಲ್ಲಿ ನಟಿಸುತ್ತಿರುವ ನಭಾ, ಔಟ್‌ಲುಕ್ ಇಂಡಿಯನ್ ಬ್ಯುಸಿನೆಸ್ ಕೊಡುವ ಮಾಡುವ 2024 ರ ಸ್ಟೈಲ್ ಐಕಾನ್ ಪ್ರಶಸ್ತಿಗೆ ಭಜನರಾಗಿದ್ದಾರೆ. ಮಹಾನಟಿ ಖ್ಯಾತಿಯ ಕೀರ್ತಿ ಸುರೇಶ್ ನಭಾಗೆ ಪ್ರಶಸ್ತಿ ನೀಡಿ ಗೌರವಿಸಿದರು. ಸ್ಟೈಲೀಶ್ ಲುಕ್‌ನಲ್ಲಿ ಅವಾರ್ಡ್ ಸ್ವೀಕರಿಸಿ ಕ್ಯಾಮೆರಾಗೆ ಪೋಸ್ ಕೊಟ್ಟಿದ್ದಾರೆ. ನಭಾ ನಟೇಶ್ ತೆಲುಗಿನಲ್ಲಿ ಸಾಲು ಸಾಲು ಪ್ಯಾನ್ ಇಂಡಿಯಾ ಸಿನಿಮಾಗಳಲ್ಲಿ ತೊಡಗಿಸಿಕೊಂಡಿದ್ದಾರೆ. ನಿಖಿಲ್ ನಾಯಕನಾಗಿ ನಟಿಸುತ್ತಿರುವ ಸ್ವಯಂಭೂ ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದು, ಅವರು ಚಿತ್ರದ ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ.



## ಜ.31ಕ್ಕೆ 'ನೋಡಿದವರು ಏನಂತಾರೆ'

ವಿಶಿಷ್ಟ ಶೀರ್ಷಿಕೆಯುಳ್ಳ ನೋಡಿದವರು ಏನಂತಾರೆ ಚಿತ್ರ ಪ್ರೇಕ್ಷಕರಿಗೆ ಒಂದು ಹೊಸ ಅನುಭವ ನೀಡಲು ಸಿದ್ಧವಾಗಿದೆ. ಈ ಸಿನಿಮಾವನ್ನು ಕುಲದೀಪ್ ಕಾರಿಯಪ್ಪ ಅವರು ಬರೆದು ನಿರ್ದೇಶಿಸಿದ್ದು, ನಾಗೇಶ್ ಗೋಪಾಲ್ ಅವರು ನಿರ್ಮಾಣ ಮಾಡಿದ್ದಾರೆ. ಈ ಚಿತ್ರದಲ್ಲಿ ನವೀನ್ ನಾಯಕನಟನಾಗಿ ನಟಿಸಿದ್ದು, ಅಪೂರ್ವ ಭಾರದ್ವಾಜ್‌ರವರು ನಾಯಕಿಯಾಗಿ ಅಭಿನಯಿಸಿದ್ದಾರೆ. ಹೊಯ್ಸಳ, ಕ್ಷೇತ್ರಪತಿ ಮತ್ತು ಸಲಾರ್ ಸಿನಮಾಗಳಲ್ಲಿ ರಗಡ್ ಹಾಗೂ ಇಂಟೆನ್ಸ್ ಪಾತ್ರಗಳ ಮೂಲಕ ಎಲ್ಲರ ಗಮನ ಸೆಳೆದಿದ್ದ ನವೀನ್ ಶಂಕರ್ ಅವರು ಈ ಸಿನಿಮಾದಲ್ಲಿ ವಿಭಿನ್ನವಾಗಿ ಕಾಣಿಸಲಿದ್ದಾರೆ. ನಿರ್ದೇಶಕರು ಹೇಳುವಂತೆ ನವೀನ್ ಶಂಕರ್ ಅವರ ಪಾತ್ರ ನಮ್ಮೆಲ್ಲರ ಒಳಗಿರುವ ಒಬ್ಬ ಮನುಷ್ಯನ ಕಥೆ ಹಾಗು ಭಾವನೆಗಳನ್ನು ಹೇಳುತ್ತದೆ. ಜೀವನದಲ್ಲಿ ನಮ್ಮ ಅಸ್ತಿತ್ವದ ಬಗ್ಗೆಯೇ ನಮಗೆ ಕಾಡುವ ಪ್ರಶ್ನೆಗಳು, ಪ್ರೀತಿ, ಆತ್ಮಾವಲೋಕನ ಹಾಗೂ ಬಾಂಧವ್ಯಗಳ ಸುತ್ತ ಈ ಸಿನಿಮಾ ಸಾಗುತ್ತದೆ.











Edited,Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ Digantha Mudrana Limited, Yeyyadi, Mangaluru 575008 email: karavalitharangini@gmail.com PH: +91 9880109212